ಸಂಪುಟ : 9 ಸಂಚಿಕೆ 94 ಪುಟ : 4 ಬೆಲೆ: 3.00 ಬುಧವಾರ ಮೇ 15 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 94 Pages : 4 Price : 3.00 Wednesday May 15 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಗದಗ ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿ/ವಿದ್ಯಾರ್ಥಿನಿಯರನ್ನು 6ನೇ ತರಗತಿಗೆ ದಾಖಲಿಸುವ ಕುರಿತು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಯು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಾಗಿರಬೇಕು, ಪ್ರಸ್ತುತ ವರ್ಷ 6ನೇ ತರಗತಿಗೆ ಪ್ರವೇಶ ಪಡೆಯಲು 5ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚಿನ ಅಂಕ ಗಳಿಸಿರಬೇಕು, ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮಿತಿಯೊಳಗಿರಬೇಕು, ವಿದ್ಯಾರ್ಥಿಗಳ ಜಾತಿ & ಆದಾಯ ಪ್ರಮಾಣ ಪತ್ರ ಮತ್ತು ಅಂಕಪಟ್ಟಿಗಳ ದೃಢೀಕೃತ ಪ್ರತಿ ಮತ್ತು 2 ಭಾವಚಿತ್ರವನ್ನು ಅರ್ಜಿಯೊಂದಿಗೆ ಲಗತ್ತಿಸಿ ಮೇ 21 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಒಂದು ಕುಟುಂಬದಲ್ಲಿ ಇಬ್ಬರು ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಕಲ್ಪಿಸಲಾಗಿದೆ.

ಲಿಖಿತ ಪ್ರವೇಶ ಪರೀಕ್ಷೆ ನಡೆಸಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08372-231828 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ಗದಗದಲ್ಲಿ ಖಾಲಿಯಿರುವ ಕೃತಕಾಂಗ ಜೋಡಣೆ (ಪಿ & ಒ) ಅಭಿಯಂತರರು ಹುದ್ದೆಗೆ ಪಿ ಮತ್ತು ಒ ಎಂಜಿನಿಯರಿಂಗ್ ಪದವಿ/ಡಿಪ್ಲೊಮಾ ಜೊತೆಗೆ 2 ರಿಂದ 5 ವರ್ಷಗಳ ಅನುಭವ ಹೊಂದಿರುವ, ಕ್ಲಿನಿಕಲ್ ಸೈಕಾಲಿಜಿಸ್ಟ್ ಹುದ್ದೆಗೆ ಕ್ಲಿನಿಕಲ್ ಸೈಕಾಲಜಿಯಲ್ಲಿ ಎಂ.ಎ. ಅಥವಾ ಎಂ.ಎಸ್ಸಿ. ಪಡೆದಿರುವ, ಸ್ಪೀಚ್ ಥೆರಪಿಸ್ಟ್ & ಆಡಿಯಾಲಿಜಿಸ್ಟ್ ಹುದ್ದೆಗೆ ಸ್ಪೀಚ್ ಮತ್ತು ಆಡಿಯಾಲಜಿಯಲ್ಲಿ ಬಿ.ಎಸ್ಸಿ ಪಡೆದಿರುವ, ಮೊಬಿಲಿಟಿ ಇನ್‌ಸ್ಟ್ರಕ್ಟರ್ ಹುದ್ದೆಗೆ ಓ ಮತ್ತು ಎಂ ನಲ್ಲಿ ಸರ್ಟಿಫಿಕೇಟ್ ಕೋರ್ಸ್ ಹೊಂದಿರುವ, ಇಯರ್ ಮೋಲ್ಡ್ ಟೆಕ್ನಿಷಿಯನ್ ಹುದ್ದೆಗೆ ಇಯರ್ ಮೋಲ್ಡ್ ಟೆಕ್ನಾಲಜಿಯಲ್ಲಿ ಸರ್ಟಿಫಿಕೇಟ್ ಕೋರ್ಸ್ ಪಡೆದಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಮೇ 29 ರ ಒಳಗಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಗದಗ, ಕೆ.ಹೆಚ್, ಪಾಟೀಲ ಸ್ಟೇಡಿಯಂ ಎದುರು ಗದಗ ಕಚೇರಿಗೆ ಲಿಖಿತ ಅರ್ಜಿ ಸಹಿತ ಅಂಕಪಟ್ಟಿಗಳ ನಕಲು ಪ್ರತಿಯನ್ನು ದೃಢೀಕರಿಸಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಡಾ॥ ಎಮ್ ಡಿ ಸಮುದ್ರಿ ಗೌರವ ಕಾರ್ಯದರ್ಶಿಗಳು ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಗದಗ (ಮೊ. 99641 87315 / 80730 41618) ಇವರನ್ನು ಸಂಪರ್ಕಿಸಬಹುದು.

## ಒಂದೇ ಸೂರಿನಲ್ಲಿ 52ಕ್ಕೂ ಹೆಚ್ಚು ತಳಿಯ ಮಾವು ಪ್ರದರ್ಶನ, ಮಾರಾಟ

# ಮನಸೆಳೆದ 'ಮಾವು ಮೇಳ'

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಾದ್ಯಂತ 8 ಸಾವಿರ ಎಕರೆ ಮಾವು ಬೆಳೆಯನ್ನು ಬೆಳೆಯಲಾಗುತ್ತಿದ್ದು, ಸಾರ್ವಜನಿಕರಿಗೆ ಹಾಗೂ ಗ್ರಾಹಕರಿಗೆ ಉತ್ತಮ ಗುಣಮಟ್ಟದ ಮಾವು ನೀಡಬೇಕೆನ್ನುವ ಉದ್ದೇಶದಿಂದ ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ತೋಟಗಾರಿಕೆ ಇಲಾಖೆಯಿಂದ ಆಯೋಜಿಸಲಾಗಿದೆ ಎಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕಾಶಿನಾಥ ಭದ್ರಣ್ಣನವರು ಹೇಳಿದರು.

ಅವರು ಮಂಗಳವಾರ ತೋಟಗಾರಿಕೆ ಇಲಾಖೆಯ ಆವರಣದಲ್ಲಿ ಆಯೋಜಿಸಲಾಗಿದ್ದ ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಉದ್ದೇಶಿಸಿ ಮಾತನಾಡಿದರು.

ಜಿಲ್ಲೆಯ ವಿವಿಧ ಭಾಗದ ರೈತರು ಮಾವು ಮಾರಾಟ ಮೇಳದಲ್ಲಿ ಸುಮಾರು 30 ಮಳಿಗೆಗಳನ್ನು ತೆರೆದಿದ್ದಾರೆ. ಅದರಲ್ಲಿ ಆರ್ಕಾ ಕೇಸರಿ, ಧಾರವಾಡ ರಸಪೂರಿ, ಖಾದರ್, ಕಲ್ಮಿ ಸೇರಿದಂತೆ ವಿವಿಧ ರೀತಿಯ ಮಾವಿನ ತಳಿಗಳನ್ನು ಮಾರಾಟ ಮಾಡಲಾಗುತ್ತಿದೆ. ಸುಮಾರು 52 ವಿವಿಧ ಮಾವಿನ ತಳಿಗಳನ್ನು ಸಾರ್ವಜನಿಕರ ಪ್ರದರ್ಶನಕ್ಕೆ ಇಡಲಾಗಿದ್ದು, 20ರಿಂದ 30 ಟನ್ ಮಾವು ಮಾರಾಟವಾಗುವ ನಿರೀಕ್ಷೆ ಇದೆ ಎಂದು ಹೇಳಿದರು.

ಧಾರವಾಡ ಜಿಲ್ಲೆಯ ಕೆಲಗೇರಿ ಗ್ರಾಮದ ಮಾವು ಬೆಳೆಗಾರ ಪ್ರಮೋದ ಗಾವ್ಕರ ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಉದ್ಘಾಟಿಸಿ ಮಾತನಾಡಿ, 2-3 ವರ್ಷಗಳಿಂದ ಮಾವು



ಮೇಳವನ್ನು ಆಯೋಜಿಸಿರಲಿಲ್ಲ. ಈ ವರ್ಷ ಮಾವು ಮೇಳ ಆಯೋಜಿಸಿರುವುದು ಖುಷಿ ತಂದಿದೆ. ಪ್ರತಿ ವರ್ಷ ಮೇಳವನ್ನು ಆಯೋಜನೆ ಮಾಡಬೇಕು. ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯನ್ನು ತೋರಿಸುತ್ತಾರೆ ಮತ್ತು ನಮ್ಮ ಸಮಸ್ಯೆಗಳಿಗೆ ಸ್ಪಂದಿಸುತ್ತಾರೆ ಎಂದು ಹೇಳಿದರು.

ಮಾವಿನ ತಳಿಗಳಲ್ಲಿಯೇ ಅತೀ ದುಬಾರಿಯಾಗಿರುವ ಮೀಯಾಝಾಕಿ ಎಂಬ ಜಪಾನ್ ತಳಿಯ ಮಾವನ್ನು ಬೆಳೆಯುತ್ತಿದ್ದಾರೆ.

ಈ ಮಾವಿನ ಹಣ್ಣಿನ ಪ್ರತಿ ಕೆಜಿಗೆ ಸುಮಾರು 2.7ಲಕ್ಷ ರೂ.ಗಳು ಆಗಿದ್ದು, ಒಂದು ಹಣ್ಣನ್ನು 10 ಸಾವಿರ ರೂ.ಗಳಿಗೆ ಮಾರಾಟ ಮಾಡಲಾಗಿದೆ ಎಂದು ಮಾವು ಬೆಳೆಗಾರ ಪ್ರಮೋದ ಗಾವ್ಕರ ಹೇಳಿದರು.

ಜಪಾನ ತಳಿಯಾದ ಮಿಯಾಝಾಕಿಯನ್ನು ಮಹಾರಾಷ್ಟ್ರದ ರತ್ನಗಿರಿಯಿಂದ ತಂದಿರುವುದಾಗಿ ತಿಳಿಸಿದರಲ್ಲದೆ, ಸುಮಾರು 7 ಸಾವಿರಕ್ಕೂ ಹೆಚ್ಚು ಮಾವಿನ ಗಿಡಗಳನ್ನು ಬೆಳೆಸುತ್ತಿದ್ದು, ಅದರಲ್ಲಿ ಈ ಮಿಯಾಝಾಕಿ ಸೇರಿದಂತೆ ವಿವಿಧ ಮಾವಿನ ತಳಿಗಳನ್ನು ಬೆಳೆಯುತಿದ್ದೇನೆ ಎಂದರು.

ಮಾವು ಪ್ರದರ್ಶನ ಮತ್ತು ಮಾರಾಟ ಮೇಳದಲ್ಲಿ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಇಮ್‌ತಾಜ್ ಚಂದಾಪುರ, ಇಲಾಖೆಯ ವಿವಿಧ ಅಧಿಕಾರಿಗಳು, ರೈತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

> ಜೋಗೆಲ್ಲಾಪುರದ ಮಾವು ಬೆಳಗಾರರಾದ ರಾಮನಗೌಡ ಪಾಟೀಲ್ ಮಾತನಾಡಿ, ಸುಮಾರು ಹತ್ತು ವರ್ಷದಿಂದ ಈ ಮಾವು ಮೇಳದಲ್ಲಿ ಮಳಿಗೆ ಹಾಕುತ್ತಿದ್ದೇನೆ. ಕಲ್ಮಿ, ಅಪಸ್ ಹಾಗೂ ಸುಂದರ ಶಾಂತ ಮಾವಿನ ತಳಿಗಳನ್ನು ಮಾರಾಟಕ್ಕೆ ತಂದಿದ್ದೇನೆ. 3-4 ವರ್ಷಗಳಿಂದ ಇಳುವರಿ ಕಡಿಮೆಯಾಗಿದೆ. ಈ ಬಾರಿ 1.5 ಟನ್ ಮಾರಾಟ ಮಾಡುವ ನಿರೀಕ್ಷೆಯನ್ನು ಇಟ್ಟುಕೊಂಡು ಮಾವು ಮಾರಾಟ ಮೇಳದಲ್ಲಿ ಮಳಿಗೆಯನ್ನು ಹಾಕಿದ್ದೇನೆ ಎಂದು ಹೇಳಿದರು.



## ಧರ್ಮದಲ್ಲಿ ನಮ್ಮ ನಂಬಿಕೆ ಅಚಲವಾಗಿರಲಿ



■ವಿಜಯಸಾಕ್ಷಿ ಸುದ್ದಿ, ಚನ್ನರಾಯಪಟ್ಟಣ

ಮನುಷ್ಯ ಜೀವನದಲ್ಲಿ ಸಾಧನೆ ಮಾತನಾಡಬೇಕೇ ಹೊರತು ಮಾತನಾಡುವುದೇ ಸಾಧನೆಯಾಗಬಾರದು. ಗುರಿಯೆಡೆಗೆ ನಮ್ಮೆಲ್ಲರ ಗಮನ ಇರಬೇಕೇ ಹೊರತು ಮಧ್ಯೆ ಬರುವ ಅಡೆತಡೆಗಳ ಮೇಲಲ್ಲ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ತಾಲೂಕಿನ ನಾಗರನವಿಲೆ ಶ್ರೀ ನಾಗೇಶ್ವರಸ್ವಾಮಿಗೆ ಕ್ಷೀರಾಭಿಷೇಕ ನೆರವೇರಿಸಿದ ನಂತರ ಜರುಗಿದ ಧರ್ಮ ಸಮಾರಂಭದಲ್ಲಿ ಆಶೀರ್ವಚನ ನೀಡುತ್ತಿದ್ದರು.

ಜೀವನದ ಉಜ್ವಲ ಭವಿಷ್ಯಕ್ಕೆ ಧರ್ಮ ಪ್ರಜ್ಞೆ ಮತ್ತು ಧರ್ಮಾಚರಣೆ ಬಹಳ ಮುಖ್ಯ. ದೇವರು ಧರ್ಮದಲ್ಲಿ ನಮ್ಮ ನಂಬಿಕೆ ಅಚಲವಾಗಿರಬೇಕು. ದೇಹವನ್ನು ದುಡಿಮೆಗೆ, ಮನಸ್ಸನ್ನು ಭಗವಂತನಿಗೆ ಅರ್ಪಿಸಿ ಮುನ್ನಡೆದಾಗ ಜೀವನ ಉಜ್ವಲಗೊಳ್ಳುತ್ತದೆ. ಮನುಷ್ಯನಲ್ಲಿ ವೈಚಾರಿಕ ಭಾವನೆಗಳು ಬೆಳೆದು ಬರಲಿ. ಆದರೆ ಧರ್ಮ, ದೇವರಲ್ಲಿ ನಾಸ್ತಿಕ ಮನೋಭಾವ ಬೆಳೆಯಬಾರದು ಎಂದರು.

ನವಿಲೆ ಗ್ರಾಮದ ಸಿದ್ಧೇಶ್ವರ ಶಾಸ್ತ್ರಿಗಳು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಯುವ ಸಾಹಿತಿ ಡಾ.ಗುರುಪಾದಯ್ಯ ಸಾಲಿಮಠ ಇವರಿಗೆ ಗುರುರಕ್ಷೆ ನೀಡಿ ಶ್ರೀಗಳು ಆಶೀರ್ವದಿಸಿದರು. ಮಾಜಿ ಶಾಸಕ ಹಾಗೂ ಹಾಸನ ಜಿಲ್ಲೆ ವೀರಶೈವ ಸಮಾಜದ ಅಧ್ಯಕ್ಷ ಗುರುದೇವ, ಹಾಸನ ತಾಲೂಕಾ ವೀರಶೈವ ಸಮಾಜದ ಕಟ್ಟಾಯ ಶಿವಕುಮಾರ್, ನವಿಲೆ ಮಂಜುನಾಥ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಪವನಕುಮಾರ್ ನಿರೂಪಿಸಿದರು.

## ತಪ್ಪಾದ ರೈಲು ಹತ್ತಿ ಇಳಿಯುವ ವೇಳೆ ಮಹಿಳೆ ಸಾವು; ಬಡ್ಡಿ ಸಮೇತ ಪರಿಹಾರ ನೀಡುವಂತೆ ಹೈಕೋರ್ಟ್ ಸೂಚನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರೈಲ್ವೆ ಕ್ಲೈಮ್ಸ್ ಟ್ರಿಬ್ಯುನಲ್ ತೀರ್ಪನ್ನು ರದ್ದುಗೊಳಿಸಿದ ಕರ್ನಾಟಕ ಹೈಕೋರ್ಟ್, 2014ರ ಫೆಬ್ರವರಿಯಲ್ಲಿ ರೈಲು ಹತ್ತಲು ಯತ್ನಿಸಿ ದುರಂತ ಸಾವು ಕಂಡ ಮಹಿಳೆಯ ಕುಟುಂಬಕ್ಕೆ ಎಂಟು ಲಕ್ಷ ರೂಪಾಯಿ ಪರಿಹಾರವನ್ನು ನೀಡಿದೆ.ಜಯಮ್ಮ ಮತ್ತು ಆಕೆಯ ಸಹೋದರಿ ರತ್ನಮ್ಮ ಎಂಬುವವರು ಅಶೋಕಪುರಂ/ಮೈಸೂರಿಗೆ ಹೋಗುವ ತಿರುಪತಿ ಪ್ಯಾಸೆಂಜರ್ ರೈಲಿನ ಬದಲು ಟುಟಿಕೋರಿನ್ ಎಕ್ಸ್‌ಪ್ರೆಸ್ ರೈಲು ಏರಲು ಮುಂದಾಗಿದ್ದರು.

# ಕೆರೆಗಳ ರಕ್ಷಣೆಗೆ ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದಲ್ಲಿ ಡಾ.ವಿರೇಂದ್ರ ಹೆಗ್ಗಡೆಯವರು ಕೆರೆಗಳ ಹೂಳೆತ್ತುವ ಕಾಮಗಾರಿ ಕಾರ್ಯ ಕೈಗೊಳ್ಳುತ್ತಿರುವದು ಮಾದರಿ ಯೋಜನೆಯಾಗಿದ್ದು, ಈ ಯೋಜನೆಯಿಂದ ರೈತರ ಹಾಗೂ ಅಂತರ್ಜಲ ವೃದ್ಧಿಗೆ ಹೆಚ್ಚು ಸಹಕಾರಿಯಾಗಲಿದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಬಸಾಪೂರ ಗ್ರಾಮದಲ್ಲಿ ಸೋಮವಾರ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಆಯೋಜಿಸಿದ್ದ 'ನಮ್ಮೂರು, ನಮ್ಮ ಕೆರೆ' ಕಾರ್ಯಕ್ರಮದಡಿಯಲ್ಲಿ ಬಸಾಪೂರ ಗ್ರಾಮದ ಪುರಾತನ ಕೆರೆಯ ಹೂಳೆತ್ತುವ ಕಾಮಗಾರಿಗೆ



ಚಾಲನೆ ನೀಡಿ ಮಾತನಾಡಿದರು.

ಕೆರೆ ಹೂಳೆತ್ತುವದರಿಂದ ಮಳೆಗಾಲದಲ್ಲಿ ನೀರು ಹೆಚ್ಚು ಸಂಗ್ರಹವಾಗುವ ಕಾರಣ ಅಂತರ್ಜಲ ಮಟ್ಟ ವೃದ್ಧಿಯಾಗಿ, ಕೆರೆ ವ್ಯಾಪ್ತಿಯ ಸುತ್ತಮುತ್ತಲ ಗ್ರಾಮಗಳಲ್ಲಿ ಕುಡಿಯುವ ನೀರಿನ ಬವಣೆ ನೀಗಲಿದೆ.

ಈ ನಿಟ್ಟಿನಲ್ಲಿ ಸರಕಾರ ಮಾಡಲಾರದ ಸಮಾಜಮುಖಿ ಕಾರ್ಯಕ್ರಮಗಳನ್ನು ಧರ್ಮಾಧಿಕಾರಿಗಳು ಕೈಗೊಳ್ಳುತ್ತಿರುವದು ಶ್ಲಾಘನೀಯ. ಅದಕ್ಕಾಗಿ ಎಲ್ಲರೂ ಕೆರೆ-ಕಟ್ಟೆಗಳನ್ನು ರಕ್ಷಿಸುವದಕ್ಕೆ ಮುಂದಾಗಬೇಕು ಎಂದರು.

ಯೋಜನೆಯ ಜಿಲ್ಲಾ ನಿರ್ದೇಶಕ ಯೋಗೀಶ ಎಂ. ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಉದ್ದೇಶವೇ ಗ್ರಾಮೀಣ ಪ್ರದೇಶಗಳನ್ನು ಅಭಿವೃದ್ಧಿಪಡಿಸುವದಾಗಿದ್ದು, ಸಂಸ್ಥೆಯ ವತಿಯಿಂದ ಈಗಾಗಲೇ ನೂರಾರು ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ ಎಂದರು.

ರಾಮಗೇರಿ ಗ್ರಾ.ಪಂ ಅಧ್ಯಕ್ಷೆ ಅಡಿವೆಕ್ಕ ನಿಂಗಪ್ಪ ಬೆಟಗೇರಿ, ಉಪಾಧ್ಯಕ್ಷೆ ಈರಮ್ಮ ಮಡಿವಾಳರ, ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷ ಪ್ರಕಾಶ ಜಾವೂರ, ಅಶೋಕ ತುಂಬಣ್ಣವರ, ಕಮಲವ್ವ ತುಂಬಣ್ಣವರ, ಅಣ್ಣಪ್ಪ ವಾಲ್ಮೀಕಿ, ಅನ್ನಪೂರ್ಣ ಪೂಜಾರ ಸೇರಿದಂತೆ ಅನೇಕರಿದ್ದರು.

# ಭಗೀರಥ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭೆ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಶ್ರೀ ಭಗೀರಥರ ಜಯಂತಿಯನ್ನು ಮಂಗಳವಾರ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಪೂಜೆ ಮತ್ತು ಪುಷ್ಪಾರ್ಚನೆ ಸಲ್ಲಿಸುವುದರ ಮೂಲಕ ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಸುರೇಖಾ ಅವರು ಶ್ರೀ ಭಗೀರಥರ ಅವರ ಭಾವಚಿತ್ರಕ್ಕೆ ಪೂಜೆಯೊಂದಿಗೆ ಪುಷ್ಪಾರ್ಚಣೆ ಸಲ್ಲಿಸಿ ಗೌರವಿಸಿ ನಮಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರು, ಗಣ್ಯರು, ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಶ್ರೀ ಜ.ಫಕೀರೇಶ್ವರರ ಜಾತ್ರೆಗೆ ಸಕಲ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಪ್ರತಿ ವರ್ಷದಂತೆ ಈ ವರ್ಷವೂ ಸಹ ಆಗಿ ಹುಣ್ಣಿಮೆಯ ದಿನವಾದ ಮೇ.23ರಂದು ಶಿರಹಟ್ಟಿಯ ಕರ್ತೃ ಶ್ರೀ ಜ.ಫಕೀರೇಶ್ವರರ ಜಾತ್ರಾ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಜ.ಫ. ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

ಅವರು ಮಂಗಳವಾರ ಶ್ರೀಮಠದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸಂಪ್ರದಾಯದಂತೆ ಈಗಾಗಲೇ ಮೇ.8ರಂದು ತೇರಿನ ಗಡ್ಡಿ ಹೊರಹಾಕುವುದು, ಕಳಸಾರೋಹಣ ಮಾಡಲಾಗಿದೆ.

ಮೇ.18 ಮತ್ತು 19ಕ್ಕೆ ಲಕ್ಷ್ಮೇಶ್ವರ ಮತ್ತು ಮೇ.21ರಂದು ಖಾನಾಪೂರ ಗ್ರಾಮದಲ್ಲಿ ಜಗದ್ಗುರುಗಳಿಂದ ಭಿಕ್ಷಾ ಕಾರ್ಯಕ್ರಮ, ಮೇ.21ರಂದು ಕೋಳಿವಾಡ ದ್ಯಾಮವ್ವದೇವಿಗೆ ಉಡಿ ತುಂಬುವ ಕಾರ್ಯಕ್ರಮ, ಮೇ.22ರಂದು ಹರಿಪೂರ ಗ್ರಾಮದಲ್ಲಿ ಭಿಕ್ಷೆ, ಮೇ.23ರಂದು ಹರಿಪೂರದಿಂದ ಶಿರಹಟ್ಟಿ ಪಟ್ಟಣದ ಮ್ಯಾಗೇರಿ ಪಾದಗಟ್ಟಿಯಿಂದ ಉತ್ಸವದ ಮುಖಾಂತರ ಶ್ರೀಮಠಕ್ಕೆ ಬಂದು ಉಚ್ಚಾಯ ಎಳೆಯುವುದು, ಸಂಜೆ 5 ಗಂಟೆಗೆ ಭವ್ಯ ಮೆರವಣಿಗೆ ಮತ್ತು ಸಕಲ ವಾದ್ಯಗೋಷ್ಠಿಗಳೊಂದಿಗೆ ಸಂಜೆ 5 ಗಂಟೆಗೆ ಮಹಾರಥೋತ್ಸವ, ನಂತರ ಧರ್ಮಸಭೆ ನೆರವೇರಲಿದೆ.

ಮೇ.2ರಂದು ಸಂಜೆ 5 ಗಂಟೆಗೆ ಕಡುಬಿನ ಕಾಳಗ, ಮೇ.25ರಂದು ಬೆಳಿಗ್ಗೆ 10 ಗಂಟೆಗೆ ಸಂಗೀತ ಕಚೇರಿ, ಮೇ.28ರಂದು ಕಳಸ ಇಳಿಸುವುದು, 9 ಗಂಟೆಗೆ ಜಗದ್ಗುರುಗಳು ಫಕೀರರ ವೇಷದಲ್ಲಿ ನಗಾರಿಖಾನೆಯಲ್ಲಿ ನಮಾಜ್ ಪಠಣ, ಜೂ.6ರಂದು ಅಮವಾಸ್ಯೆ ದಿನ ತೇರಿನ ಗಡಿ ಒಳ ಹಾಕುವ ಕಾರ್ಯಕ್ರಮಗಳು ನೆರವೇರಲಿವೆ. ಈ ಎಲ್ಲ ಕಾರ್ಯಕ್ರಮಗಳು ಶ್ರೀಮಠದ ಸಂಪ್ರದಾಯದಂತೆ ಹಿಂದೂ-ಮುಸ್ಲಿಂ ಭಾವೈಕ್ಯತೆಯಿಂದ ಜರುಗಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಜಾತ್ರೆಯನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

## SSLC ಪರೀಕ್ಷೆ ಟಾಪರ್ ಸನ್ಮಾನಿಸಿ, ಬಹುಮಾನ ಪ್ರಕಟಿಸಿದ ಸಿಎಂ ಸಿದ್ದರಾಮಯ್ಯ!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ರ್ಯಾಂಕ್ ಪಡೆದ ಬಾಗಲಕೋಟೆ ಜಿಲ್ಲೆ ಮುಧೋಳ ತಾಲೂಕಿನ ಮೆಳ್ಳಿಗೇರಿ ಮೊರಾರ್ಜಿ ವಸತಿ ಶಾಲೆಯ ವಿದ್ಯಾರ್ಥಿನಿ ಅಂಕಿತ ಹಾಗೂ ದ್ವಿತೀಯ ರ್ಯಾಂಕ್ ಪಡೆದ ಮಂಡ್ಯ ತಾಲೂಕಿನ ತುಂಬಿಗೆರೆ ಮೊರಾರ್ಜಿ ಶಾಲೆಯ ವಿದ್ಯಾರ್ಥಿ ನವನೀತ್ ಕೆ.ಸಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಸನ್ಮಾನಿಸಿದ್ದು, ಶುಭ ಹಾರೈಸಿದ್ದಾರೆ.

## ನರೇಂದ್ರ ಮೋದಿ ಅಧಿಕಾರಕ್ಕೆ ಮರಳುವುದಿಲ್ಲ: ಮಮತಾ ಬ್ಯಾನರ್ಜಿ

■ವಿಜಯಸಾಕ್ಷಿ ಸುದ್ದಿ, ಪಶ್ಚಿಮ ಬಂಗಾಳ



ಲೋಕಸಭೆ ಚುನಾವಣೆ ನಂತರ ಪ್ರಧಾನಿ ನರೇಂದ್ರ ಮೋದಿ ಅವರು ಮತ್ತೆ ಅಧಿಕಾರಕ್ಕೆ ಬರುವುದಿಲ್ಲ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಂಗಳವಾರ ಹೇಳಿದ್ದಾರೆ.

ಭಾರತೀಯ ಜನತಾ ಪಕ್ಷವು (ಬಿಜೆಪಿ) ಸಂದೇಶ್‌ಖಾಲಿ ವಿಷಯದಲ್ಲಿ 'ಸುಳ್ಳು' ಹರಡುತ್ತಿದೆ ಎಂದು ಆರೋಪಿಸಿದ ಅವರು, "ಲೋಕಸಭಾ ಚುನಾವಣೆಯಲ್ಲಿ ಮೋದಿ ಅಧಿಕಾರಕ್ಕೆ ಮರಳುವುದಿಲ್ಲ ಎಂಬುದೆ ಒಂದು ಗ್ಯಾರಂಟಿ; ಇಂಡಿಯಾ ಬಣವು 295 ರಿಂದ 315 ಸ್ಥಾನಗಳನ್ನು ಪಡೆಯುತ್ತದೆ, ಬಿಜೆಪಿ 200ಕ್ಕೆ ಸೀಮಿತವಾಗಲಿದೆ" ಎಂದರು.

"ಬಿಜೆಪಿ ಮತ್ತು ಪ್ರಧಾನಿ ಈ ವಿಚಾರದಲ್ಲಿ ಸುಳ್ಳು ಸುದ್ದಿ ಹಬಿ ಭಾನುವಾರ ಬಂಗಾಳದ ಬ್ಯಾರಕ್‌ಪೋರ್‌ನಲ್ಲಿ ಚುನಾವಣಾ ರ್ಯಾಲಿಯಲ್ಲಿ ಮಾತನಾಡಿದ್ದ ಮೋದಿ, "ಮಮತಾ ಬ್ಯಾನರ್ಜಿಯವರ ಪಕ್ಷ ತೃಣಮೂಲ ಕಾಂಗ್ರೆಸ್ ತನ್ನ ಹಿಂದಿನ ದುಷ್ಕೃತ್ಯಗಳನ್ನು ಮರೆಮಾಚಲು ಪ್ರಯತ್ನಿಸುತ್ತಿದೆ. ಸಂದೇಶಖಾಲಿಯಲ್ಲಿ ಆಡಳಿತ ಪಕ್ಷದ ನಾಯಕರು ಲೈಂಗಿಕ ದೌರ್ಜನ್ಯ ಮತ್ತು ಭೂಹಗರಣದ ಆರೋಪ ಹೊತ್ತಿದ್ದಾರೆ" ಎಂದು ಆರೋಪ ಮಾಡಿದ್ದರು.

ಸಂದೇಶಖಾಲಿಯ ಸಹೋದರಿಯರು ಮತ್ತು ತಾಯಂದಿರೊಂದಿಗೆ ಟಿಎಂಸಿ ಏನು ಮಾಡಿದೆ ಎಂಬುದನ್ನು ನಾವೆಲ್ಲರೂ ನೋಡಿದ್ದೇವೆ. ಮೊದಲು ಆರೋಪಿಗಳನ್ನು ರಕ್ಷಿಸಲು ಯತ್ನಿಸಿದ ಪೊಲೀಸರು, ಇದೀಗ ಟಿಎಂಸಿ ಹೊಸ ಆಟ ಆರಂಭಿಸಿದೆ. ಟಿಎಂಸಿ ಗೂಂಡಾಗಳು ಸಂದೇಶಖಾಲಿಯ ಸಹೋದರಿಯರಿಗೆ ಬೆದರಿಕೆ ಹಾಕುತ್ತಿದ್ದಾರೆ, ದಬ್ಬಾಳಿಕೆಗಾರನ ಹೆಸರು ಷಹಜಹಾನ್ ಶೇಖ್ ಎಂಬ ಕಾರಣಕ್ಕಾಗಿ ಅವರು ಅವನನ್ನು ರಕ್ಷಿಸಲು ಮತ್ತು ಕಾನೂನು ಕ್ರಮದಿಂದ ರಕ್ಷಿಸಲು ತಮ್ಮ ಕೈಲಾದಷ್ಟು ಪ್ರಯತ್ನಿಸುತ್ತಿದ್ದಾರೆ. ಟಿಎಂಸಿಗೆ ಹೆದರಬೇಡಿ ಎಂದು ಮೋದಿ ಹೇಳಿದರು.

ಸ್ಥಳೀಯ ಬಿಜೆಪಿ ನಾಯಕರೊಬ್ಬರು ಸಂದೇಶಖಾಲಿಯಲ್ಲಿ ಹಲವಾರು ಮಹಿಳೆಯರಿಂದ ಖಾಲಿ ಪೇಪರ್‌ಗಳಿಗೆ ಸಹಿ ಪಡೆದಿದ್ದಾರೆ ಎಂದು ಹೇಳುವ ಹಲವಾರು ಉದ್ದೇಶಿತ ವೀಡಿಯೊಗಳು ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡವು. ನಂತರ, ಅದನ್ನು ಟಿಎಂಸಿ ನಾಯಕರ ವಿರುದ್ಧ ಲೈಂಗಿಕ ದೌರ್ಜನ್ಯದ ದೂರು ಎಂದು ಭರ್ತಿ ಮಾಡಲಾಯಿತು ಮತ್ತು ಪ್ರತಿಭಟನೆಯಲ್ಲಿ ಭಾಗವಹಿಸಲು ಮಹಿಳೆಯರಿಗೆ ಹಣವನ್ನು ನೀಡಲಾಯಿತು ಎಂದು ವಿಡಯೋದಲ್ಲಿ ಹೇಳುತ್ತಿರುವುದು ಕಂಡುಬಂದಿದೆ.

## ಪರಿಷತ್ ಚುನಾವಣೆ| ಕೈತಪ್ಪಿದ ಬಿಜೆಪಿ ಟಿಕೆಟ್: ಪಕ್ಷೇತರ ಸ್ಪರ್ಧೆಗೆ ಮಾಜಿ ಶಾಸಕ ರಘುಪತಿ ಭಟ್ ನಿರ್ಧಾರ

■ವಿಜಯಸಾಕ್ಷಿ ಸುದ್ದಿ, ಉಡುಪಿ



ವಿಧಾನಪರಿಷತ್‌ಗೆ ನೈರುತ್ಯ ಪದವೀಧರ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವುದಾಗಿ ಬಿಜೆಪಿ ಟಿಕೆಟ್ ಆಕಾಂಕ್ಷಿ ಹಾಗೂ ಮಾಜಿ ಶಾಸಕ ಕೆ. ರಘುಪತಿ ಭಟ್ ಘೋಷಿಸಿದ್ದಾರೆ.

ಉಡುಪಿಯ ಕರಂಬಳ್ಳಿಯ ನಿವಾಸದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, "ಪದವೀಧರ ಕ್ಷೇತ್ರದಿಂದ ಬಿಜೆಪಿಯ ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದೆ. ಪಕ್ಷದ ರಾಜ್ಯ ಮತ್ತು ರಾಷ್ಟ್ರ ನಾಯಕರು ಟಿಕೆಟ್ ನೀಡುವ ಭರವಸೆಯನ್ನೂ ಕೊಟ್ಟಿದ್ದರು. ಅದರಂತೆ ಕ್ಷೇತ್ರದಾದ್ಯಂತ ಮತದಾರರ ನೋಂದಣಿ ಪ್ರಕ್ರಿಯೆಯಲ್ಲಿ ತೊಡಗಿಸಿಕೊಂಡು 20 ಸಾವಿರಕ್ಕೂ ಅಧಿಕ ಜನರ ನೋಂದಣಿ ಮಾಡಿಸಿದ್ದೇನೆ. ಆದರೆ, ಪಕ್ಷ ಟಿಕೆಟ್ ನೀಡಲು ನಿರಾಕರಿಸಿರುವುದರಿಂದ ಮನನೊಂದು ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿಯಲು ನಿರ್ಧರಿಸಿದ್ದೇನೆ" ಎಂದಿದ್ದಾರೆ. "ಪಕ್ಷಕ್ಕಾಗಿ ದಶಕಗಳ ಕಾಲ ದುಡಿದ ಹಿರಿಯರಿಗೆ ಟಿಕೆಟ್ ನೀಡಬಹುದಿತ್ತು. ಹಿರಿತನ ಹಾಗೂ ಪಕ್ಷನಿಷ್ಠೆ ಬದಿಗಿಟ್ಟು ವರ್ಷದ ಹಿಂದಷ್ಟೇ ಬಿಜೆಪಿ ಸೇರಿದವರಿಗೆ ಟಿಕೆಟ್ ನೀಡಿರುವುದು ಬೇಸರ ತಂದಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಉಡುಪಿ ಕ್ಷೇತ್ರದಿಂದ ಟಿಕೆಟ್ ನಿರಾಕರಿಸಿದಾಗಲೂ ಬಂಡಾಯ ಪ್ರದರ್ಶಿಸದೆ ಪಕ್ಷದ ಗೆಲುವಿಗೆ ಶ್ರಮಿಸಿದ್ದೇನೆ.

ಲೋಕಸಭಾ ಚುನಾವಣೆ ಸಂದರ್ಭದಲ್ಲೂ ದುಡಿದಿದ್ದೇನೆ. ಇಷ್ಟಾದರೂ ಟಿಕೆಟ್ ನಿರಾಕರಿಸಿರುವುದು ಅತೀವ ನೋವು ತಂದಿದೆ" ಎಂದು ರಘುಪತಿ ಭಟ್ ಹೇಳಿದ್ದಾರೆ.

ಉಡುಪಿಯ ಮನೆಗೆ ಜಿಲ್ಲಾ ಬಿಜೆಪಿಯ ತಂಡ ಜಿಲ್ಲಾಧ್ಯಕ್ಷ ಕಿಶೋರ್ ಕುಮಾರ್ ಅವರ ನೇತೃತ್ವದಲ್ಲಿ ತೆರಳಿ ರಘುಪತಿ ಭಟ್ ಅವರನ್ನು ಸಮಾಧಾನಪಡಿಸಿ, ಮನವೊಲಿಸಲು ಪ್ರಯತ್ನಿಸಲಾಯಿತಾದರೂ, ಮಾತುಕತೆ ವಿಫಲವಾಗಿದೆ ಎಂದು ತಿಳಿದು ಬಂದಿದೆ.

## ಎಲ್ಗರ್ ಪರಿಷತ್ ಪ್ರಕರಣ: ಗೌತಮ್ ನವ್ಲಾಖಾಗೆ ಸುಪ್ರೀಂ ಕೋರ್ಟ್‌ನಿಂದ ಜಾಮೀನು

■ವಿಜಯಸಾಕ್ಷಿ ಸುದ್ದಿ, ದೆಹಲಿ

ಎಲ್ಗರ್ ಪರಿಷತ್–ಮಾವೋವಾದಿ ನಂಟು ಪ್ರಕರಣದಲ್ಲಿ ಸಾಮಾಜಿಕ ಕಾರ್ಯಕರ್ತ ಗೌತಮ್ ನವ್ಲಾಖಾ ಅವರಿಗೆ ಸುಪ್ರೀಂ ಕೋರ್ಟ್ ಇಂದು ಜಾಮೀನು ಮಂಜೂರು ಮಾಡಿದೆ. ಗೃಹ ಬಂಧನದ ಭದ್ರತೆ ವೆಚ್ಚ 20 ಲಕ್ಷ ರೂಪಾಯಿ ಪಾವತಿಸುವಂತೆ ನವ್ಲಾಖಾ ಅವರಿಗೆ ನಿರ್ದೇಶನ ನೀಡಿದೆ.

ನವ್ಲಾಖಾ ಅವರಿಗೆ ಜಾಮೀನು ನೀಡಿರುವ ಬಾಂಬೆ ಹೈಕೋರ್ಟ್ ಆದೇಶದ ವಿರುದ್ಧ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿಗಳಾದ ಎಂ.ಎಂ ಸುಂದ್ರೇಶ್ ಮತ್ತು ಎಸ್.ವಿ.ಎನ್ ಭಟ್ಟಿ ಅವರ ಪೀಠ ವಿಚಾರಣೆ ನಡೆಸುತ್ತಿದೆ.ಜನವರಿ 1, 2018 ರಂದು ಮಹಾರಾಷ್ಟ್ರದ ಪುಣೆ ಜಿಲ್ಲೆಯ ಭೀಮಾ ಕೋರೆಗಾಂವ್ ಗ್ರಾಮದಲ್ಲಿ ಭುಗಿಲೆದ್ದ ಹಿಂಸಾಚಾರದಲ್ಲಿ ಭಾಗಿಯಾಗಿದ ಆರೋಪದ ಮೇಲೆ ಪತ್ರಕರ್ತ ಮತ್ತು ಸಾಮಾಜಿಕ ಕಾರ್ಯಕರ್ತ ನವ್ಲಾಖಾ ಅವರನ್ನು ಏಪ್ರಿಲ್ 14, 2020 ರಂದು ಎನ್‌ಐಎ ಬಂಧಿಸಿತ್ತು. ಅನಾರೋಗ್ಯದ ಕಾರಣ, ನವೆಂಬರ್ 2022ರಲ್ಲಿ ಸುಪ್ರೀಂ ಕೋರ್ಟ್ ನವ್ಲಾಖಾ ಅವರ ಗೃಹ ಬಂಧನಕ್ಕೆ ಆದೇಶಿಸಿತ್ತು.

ಯುಎಪಿಎ ಸೆಕ್ಷನ್ 15ರ ಅಡಿಯಲ್ಲಿ ನವ್ಲಾಖಾ ಅವರು ಭಯೋತ್ಪಾದಕ ಕೃತ್ಯ ಎಸಗಿದ್ದಾರೆ ಎಂದು ದೃಢೀಕರಿಸಲು ಯಾವುದೇ ಸಾಕ್ಷ್ಯ ಇಲ್ಲ ಎಂದು ಗಮನಿಸಿದ್ದ ನ್ಯಾಯಮೂರ್ತಿಗಳಾದ ಎ.ಎಸ್ ಗಡ್ಕರಿ ಮತ್ತು ಶಿವಕುಮಾರ್ ಅವರ ಬಾಂಬೆ ಹೈಕೋರ್ಟ್ ಪೀಠ ಕಳೆದ ಡಿಸೆಂಬರ್‌ನಲ್ಲಿ ನವ್ಲಾಖಾ ಅವರಿಗೆ ಜಾಮೀನು ನೀಡಿತ್ತು.

### ದುರ್ಜನರ ಸಂಗವು ಇದ್ದಲಿನಂತೆ, ಸಜ್ಜನರ ಸಂಗ ಹೆಜ್ಜೇನ ಸವಿದಂತೆ

# ಸಾಂಗತ್ಯದ ಫಲ

ನೀತಿ ಕಥೆ



ಒಂದು ದಿನ ಓರ್ವ ರಾಜನು ತನ್ನ ಮಂತ್ರಿ ಮಾಗಧರೊಂದಿಗೆ ಬೇಟೆಯಾಡಲು ಕಾಡೊಂದನ್ನು ಹೊಕ್ಕನು. ಚಿರತೆಯನ್ನು ಬೆನ್ನಟ್ಟಿದ ರಾಜ ತನ್ನ ಕುದುರೆಯ ಮೇಲೆ ಮುಂದೆ ಸಾಗಿ ಕಾಡಿನೊಳಗೆ ಬಲು ದೂರ ಹೋಗಿಬಿಟ್ಟನು. ದಣಿವು, ಆಯಾಸಗಳಿಂದ ಬಳಲಿದ ಮಹಾರಾಜನು ಮರವೊಂದರ ಕೆಳಗೆ ಕುಳಿತುಕೊಂಡನು. ಕೂಡಲೇ ಆ ಮರದ ಮೇಲಿದ್ದ ಗಿಳಿಯೊಂದು 'ಎಲ್ಲರೂ ಬನ್ನಿ ಇಲ್ಲಿ... ಈ ಮನುಷ್ಯನ ಹತ್ತಿರ ಬಹಳ ಸಂಪತ್ತಿದೆ. ಈತನನ್ನು ಲೂಟಿ ಮಾಡಿ, ಹೊಡೆದು ಕಟ್ಟಿಹಾಕಿ' ಎಂದು ಜೋರು ಜೋರಾಗಿ ಅರಚಲಾರಂಭಿಸಿತು.

ತುಸು ಆಶ್ಚರ್ಯದಿಂದಲೇ ನೋಡುತ್ತಿದ್ದ ರಾಜ ದೂರದಿಂದ ವಿಚಿತ್ರ ವೇಷ ಧರಿಸಿದ, ಕೈಯಲ್ಲಿ ಭರ್ಜಿ, ಕೋಲು, ಚಾಕು, ಚೂರಿಗಳನ್ನು ಹಿಡಿದ ಹಲವಾರು ಜನ ಡಕಾಯಿತರು ಈತನೆಡೆ ಬರುತ್ತಿರುವುದನ್ನು ಕಂಡು ಇವರ ಕೈಯಲ್ಲಿ ಸಿಕ್ಕರೆ ತನಗೆ ಉಳಿಗಾಲವಿಲ್ಲ ಎಂದು ಭಾವಿಸಿ, ಮಹಾರಾಜನು ಕೂಡಲೇ ತನ್ನ ಕುದುರೆಯನ್ನೇರಿ ಅಲ್ಲಿಂದ ಧಾವಿಸಿ ಬಲು ದೂರದವರೆಗೆ ಮುಂದೆ ಹೋದನು. ಬಹಳಷ್ಟು ದೂರ ಕುದುರೆಯನ್ನು ಓಡಿಸಿ ಹೋದ ರಾಜನಿಗೆ ಇನ್ನು ಡಕಾಯಿತರು ತನ್ನನ್ನು ಹಿಂಬಾಲಿಸುವುದಿಲ್ಲ ಎಂದು ಖಾತರಿಯಾದಾಗ ಅಲ್ಲಿಯೇ ಇದ್ದ ಮತ್ತೊಂದು ಮರದ ಅಡಿಯಲ್ಲಿ ದಣಿವಾರಿಸಿಕೊಳ್ಳಲು ಕುಳಿತುಕೊಂಡನು.

ಏನಾಶ್ಚರ್ಯ! ಇಲ್ಲಿಯೂ ಒಂದು ಗಿಣಿ ಕುಳಿತಿತ್ತು. ಆಯಾಸದಿಂದ ಬಳಲಿದ ರಾಜನನ್ನು ಕಂಡು ಆ ಗಿಣಿಯು 'ಮಹಾಶಯರಿಗೆ ನಮಸ್ಕಾರ... ತುಂಬ ದೂರದಿಂದ ಬಂದಿರುವಿರಿ ಎಂದು ಕಾಣುತ್ತದೆ. ಇಲ್ಲಿಯೇ ಹತ್ತಿರದಲ್ಲಿ ನಮ್ಮ ಋಷಿಗಳ ಆಶ್ರಮವಿದೆ. ದಯವಿಟ್ಟು ಬಂದು ನಮ್ಮ ಅತಿಥ್ಯವನ್ನು ಸ್ವೀಕರಿಸಿ' ಎಂದು ಗಿಣಿ ಹೇಳಿತು.

ತುಸು ಆಶ್ಚರ್ಯದಿಂದಲೇ ಎದ್ದು ನಿಂತ ಮಹಾರಾಜನಿಗೆ ದಾರಿ ತೋರಿಸಿದ ಗಿಣಿ ಆಶ್ರಮದ ಮುಖ್ಯ ಪರ್ಣಕುಟಿಯತ್ತ ಕರೆದೊಯ್ಯಿತು. ಅಲ್ಲಿ ಧ್ಯಾನ ನಿರತರಾಗಿ ಕುಳಿತಿದ್ದ ಋಷಿ ನಿಧಾನವಾಗಿ ಕಣ್ಣು ತೆರೆದು ರಾಜರನ್ನು ನೋಡುತ್ತಾ 'ಮಹಾರಾಜರಿಗೆ ತುಂಬಾ ದಣಿವಾಗಿದೆ ಎನಿಸುತ್ತದೆ, ಬನ್ನಿ ಕೈ–ಕಾಲು ತೊಳೆದು ಸ್ವಲ್ಪ ಫಲಹಾರವನ್ನು ಸೇವಿಸಿ, ದಣಿವಾರಿಸಿಕೊಳ್ಳಿ' ಎಂದು ಆತ್ಮೀಯವಾಗಿ ಆಹ್ವಾನಿಸಿದರು.

ಮುನಿಗಳ ಆಣತಿಯಂತೆ ಹತ್ತಿರದಲ್ಲಿಯೇ ಇದ್ದ ಕೊಳದಲ್ಲಿ ಕೈ–ಕಾಲು ಮುಖ ತೊಳೆದುಕೊಂಡು ಬಂದ ಮಹಾರಾಜನು ಮುನಿಗಳು ನೀಡಿದ ಹಣ್ಣುಗಳನ್ನು ಸೇವಿಸಿ ಕೊಟ್ಟ ಹಾಲನ್ನು ಕುಡಿದನು. ಕೆಲ ಹೊತ್ತಿನ ವಿಶ್ರಾಂತಿಯ ಬಳಿಕವೂ ಆತನ ಮುಖದ ಮೇಲಿನ ನೆರಿಗೆಗಳು ಮಾಯವಾಗದೆ ಇದ್ದುದನ್ನು ಕಂಡು ಋಷಿಮುನಿಗಳು 'ಮಹಾರಾಜ, ನಿನ್ನ ಚಿಂತೆಗೆ ಕಾರಣವೇನು' ಎಂದು ಕೇಳಿದಾಗ.... ಮಹಾರಾಜನು ಬೇಟೆಗೆ ಬಂದಾಗಿನಿಂದ ನಡೆದ ವಿದ್ಯಮಾನಗಳನ್ನು ಮುನಿವರ್ಯರಿಗೆ ಅರುಹಿ ಎರಡು ಗಿಣಿಗಳ ಸ್ವಭಾವದ ವೈಚಿತ್ರ್ಯಗಳನ್ನು ತಿಳಿಸಿದನು.

ನಸುನಕ್ಕ ಮುನಿಗಳು 'ಹಾಗಾದರೆ ನೀವು ನಮ್ಮ ತಮ್ಮ ವಾಸಿಸುತ್ತಿರುವ ಜಾಗಕ್ಕೆ ಹೋಗಿ ಬಂದಿರುವಿರಿ' ಎಂದಾಗ ರಾಜನ ಆಶ್ಚರ್ಯ ಮೇರೆ ಮೀರಿತ್ತು. ಆಗ ಮುನಿಗಳು 'ಅಷ್ಟೊಂದು ಆಶ್ಚರ್ಯ ಪಡುವ ಅಗತ್ಯವಿಲ್ಲ ಮಹಾರಾಜ. ನನ್ನ ಮತ್ತು ನನ್ನ ಸಹೋದರನ ಬಳಿ ಇರುವ ಎರಡು ಗಿಣಿಗಳು ಒಂದೇ ತಾಯಿಯ ಮಕ್ಕಳು.

ನನ್ನ ಸಹೋದರ ದರೋಡೆಯನ್ನು ವೃತ್ತಿಯನ್ನಾಗಿ ಮಾಡಿಕೊಂಡರೆ, ನಾನು ಆಧ್ಯಾತ್ಮ ಸಾಧನೆಯನ್ನು ಜೀವನ ಮಾರ್ಗವಾಗಿ ಆಯ್ದುಕೊಂಡೆನು. ದ–ರೋಡೆಯೇ ವೃತ್ತಿಯಾದ ನನ್ನ ತಮ್ಮನ ಬಳಿ ಬೆಳೆದ ಗಿಣಿ ಮರಿ ಕಡಿ, ಬಡಿ, ಹೊಡಿ, ದೋಚು ಎಂಬ ಮಾತುಗಳನ್ನು ಆಡಿದರೆ, ಆಶ್ರಮದ ಪ್ರಶಾಂತ ಮತ್ತು ಸಂಸ್ಕಾರಯುತ ವಾತಾವರಣದಲ್ಲಿ ಬೆಳೆದ ಗಿಣಿ ಮರಿಯೂ ಇಲ್ಲಿಯ ಭಾಷೆಯನ್ನು ಮಾತನಾಡಿತಷ್ಟೇ' ಎಂದು ನುಡಿದರು. ಎರಡು ಗಿಣಿಗಳ ನಡುವಣ ವ್ಯತ್ಯಾಸವನ್ನು ಅರಿತ ಮಹಾರಾಜ ಮುನಿವರರ ಮಾತುಗಳಿಗೆ ಹೌದೆಂಬಂತೆ ತಲೆದೂಗಿದನು.

ನೋಡಿದಿರಾ ಸ್ನೇಹಿತರೆ, ದುರ್ಜನರ ಸಂಗವು ಇದ್ದಲಿನಂತೆ. ಬಿಸಿಯಾಗಿದ್ದರೆ ಕೈಯನ್ನು ಸುಡುವುದು. ಆರಿದ್ದರೆ ಕಪ್ಪು ಮಸಿಯನ್ನು ಹಚ್ಚುವುದು ಅದರ ಹುಟ್ಟುಗುಣ. ಆದ್ದರಿಂದಲೇ ನಮ್ಮ ಹಿರಿಯರು ಹೇಳುವುದು 'ಸಜ್ಜನರ ಸಂಗ ಹೆಜ್ಜೇನ ಸವಿದಂತೆ' ಎಂದು. ಆದ್ದರಿಂದ, ನಮ್ಮ ಸ್ನೇಹಿತರನ್ನು ಬಲು ಎಚ್ಚರಿಕೆಯಿಂದ ಆಯ್ದುಕೊಳ್ಳೋಣ.

**– ವೀಣಾ ಹೇಮಂತ್ ಗೌಡ ಪಾಟೀಲ್.**
ಮುಂಡರಗಿ.

## ಪಠ್ಯೇತರ ಚಟುವಟಿಕೆಗಳಿಂದ ಸರ್ವತೋಮುಖ ಬೆಳವಣಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಪ್ರತಿಭೆಯನ್ನು ಬೆಳೆಸಿಕೊಳ್ಳಲು ಇಂತಹ ಕಾರ್ಯಕ್ರಮಗಳು ಪೂರಕವಾಗಿರುತ್ತವೆ.

ಕೇವಲ ಪಠ್ಯಕ್ರಮದ ಅಧ್ಯಯನದಿಂದ ಉತ್ತಮ ವ್ಯಕ್ತಿತ್ವ ಬೆಳೆಯಲಾರದು. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರ ಮೂಲಕ ವಿದ್ಯಾರ್ಥಿಗಳು ಸರ್ವತೋಮುಖ ಬೆಳವಣಿಗೆ ಹೊಂದಲು ಸಾಧ್ಯವೆಂದು ಡಾ. ರಾಕೇಶ ಹಿರೇಮನಿ ಅಭಿಪ್ರಾಯಪಟ್ಟರು.

ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾ ವಿದ್ಯಾಲಯದಲ್ಲಿ ಮಹಿಳಾ ಸಂಘದ ಆಶ್ರಯದಲ್ಲಿ 'ಅವಿರ್ಭಾವ' ಸಾಂಸ್ಕೃತಿಕ ಹಬ್ಬ ಉದ್ಘಾಟನಾ ಸಮಾರಂಭದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.




ಸಂಗೀತ ಶಿಕ್ಷಕ ಮಹಾಂತೇಶ ಮಾದರ ಹಾಡಿನ ಸ್ಪರ್ಧೆಯ ನಿರ್ಣಾಯಕರಾಗಿ ಕಾರ್ಯ ನಿರ್ವಹಿಸಿ, ವಿದ್ಯಾರ್ಥಿಗಳು ಹಾಡಿನ ಸ್ಪರ್ಧೆಯಲ್ಲಿ ಭಾಗವಹಿಸುವಾಗ ಅನುಸರಿಸಬೇಕಾದ ನಿಯಮಗಳನ್ನು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾ ಎಂ.ಎಂ. ಬುರಡಿ ಮಾತನಾಡಿ, ಮೇ. 18ರವರೆಗೆ ನಡೆಯುವ ಫನ್‌ವೀಕ್ ಕಾರ್ಯಕ್ರಮದ ಅಂಗವಾಗಿ ಏರ್ಪಡಿಸುವ ಎಲ್ಲ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸ್ಪರ್ಧೆಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಶಕುಂತಲಾ ಮಾಳೆಕೊಪ್ಪ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಮಹಿಳಾ ಸಂಘದ ಕಾರ್ಯಾಧ್ಯಕ್ಷರಾದ ಪ್ರೊ. ಎಸ್.ಐ. ಪಟ್ಟಣಶೆಟ್ಟರ ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರೊ. ಶಿಲ್ಪಾ ಮ್ಯಾಗೇರಿ ಅವರು ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಪೂಜಾ ಮಳಿಮಠ ವಂದಿಸಿದರು.

## ಕಟ್ಟಡ ಕಾರ್ಮಿಕರ ಸಮ್ಮೇಳನ ಮೇ 28ಕ್ಕೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಮೇ 28ರಂದು ವಿಶ್ವ ಕಾರ್ಮಿಕ ದಿನಾಚರಣೆ ಹಾಗೂ ಕಟ್ಟಡ ಕಾರ್ಮಿಕರ ಪ್ರಥಮ ಸಮ್ಮೇಳನ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್ ಹಾಗೂ ಜಿಲ್ಲಾ ಸಂಘಟನಾ ಸಂಚಾಲಕ ತುಕಾರಾಮ್ ಬಿ.ಪಾತ್ರೋಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗರದಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಡಾ. ಕೆ.ಎಸ್. ಜನಾರ್ಧನ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಂಡರು.



ಗಂಗಾವತಿ, ಕಾರಟಗಿ, ಕನಕಗಿರಿ ತಾಲೂಕುಗಳ ಸಮ್ಮೇಳನವನ್ನು ಮೇ.19ರಂದು ನಡೆಸಲು ತೀರ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಜಿಲ್ಲಾ ಸಮ್ಮೇಳನ ಸಂಚಾಲನ ಸಮಿತಿ ರಚಿಸಲಾಗಿ, ಸಂಚಾಲಕರಾಗಿ ಎಸ್.ಎ. ಗಫಾರ್. ಎ.ಎಲ್. ತಿಮ್ಮಣ್ಣ, ನೂರ್ ಸಾಬ್ ಹೊಸಮನಿ, ತುಕಾರಾಮ್ ಬಿ. ಪಾತ್ರೋಟಿ, ರಾಜಾಸಾಬ್ ತಹಸೀಲ್ದಾರ್, ರಾಜಪ್ಪ ಚೌಹಾಣ್, ಜಾಫರ್ ಕುರಿ, ಮೌಲಾ ಹುಸೇನ್ ಹಣಗಿ ಆಯ್ಕೆಯಾದರು.

ಸಭೆಯ ಅಧ್ಯಕ್ಷತೆಯನ್ನು ಭಾರತ್ ಕಮ್ಯೂನಿಸ್ಟ್ ಪಕ್ಷದ ಜಿಲ್ಲಾ ಕಾರ್ಯದರ್ಶಿ ಹುಲುಗಪ್ಪ ಅಕ್ಕಿರೊಟ್ಟಿ ವಹಿಸಿದ್ದರು. ಕವಲೂರ ಗ್ರಾಮ ಘಟಕದ ಮುಖಂಡ ಶಂಶುದ್ದೀನ್ ಮಕಾಂದಾರ್, ಮಂಜುನಾಥ್ ಗುಗ್ರಿ ಮುಂತಾದವರು ಭಾಗವಹಿಸಿದ್ದರು.

## ಪೂರ್ವ ಮುಂಗಾರು ಹಂಗಾಮಿನಲ್ಲಿ ಭೂಮಿಯ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೃಷಿ ಚಟುವಟಿಕೆಗಳಲ್ಲಿ ಭೂಮಿಯನ್ನು ಸಿದ್ಧಪಡಿಸುವುದು ಬಹು ಮುಖ್ಯ ಸಾಗುವಳಿ ಕ್ರಮ. ಇದರ ಮೊದಲ ಹಂತ ಬೇಸಿಗೆ ಉಳುಮೆ ಅಥವಾ ಮಾಗಿ ಉಳುಮೆ. ರೈತ ಬಾಂಧವರು ಮೇ ತಿಂಗಳಿನಲ್ಲಿ ಎಂ.ಬಿ ನೇಗಿಲಿನಿಂದ ಹೊಲವನ್ನು ಉಳುಮೆ ಮಾಡಬೇಕು. ಇದರಿಂದ ಮಣ್ಣು ಸಡಿಲಗೊಂಡು ಕೆಳಗಡೆ ಇರುವ ಸಮೃದ್ಧವಾದ ಪೋಷಕಾಂಶಯುಕ್ತ ಮಣ್ಣು ಮೇಲ್ಭಾಗಕ್ಕೆ ಬರುತ್ತದೆ. ಸೂರ್ಯನ ಕಿರಣಗಳ ಶಾಖಕ್ಕೆ ಒಳಗಾಗುವುದರಿಂದ ಮಣ್ಣು ಹೆಚ್ಚು ಫಲವತ್ತತೆಯನ್ನು ಹೊಂದುತ್ತದೆ. ಉಳುಮೆ ಮಾಡಿದ ಮಣ್ಣು ಸೂಕ್ಷ್ಮ ಜೀವಿಗಳಿಗೆ ಹಾಗೂ ರೈತನ ಮಿತ್ರ ಎರೆಹುಳುಗಳ ಬೆಳವಣಿಗೆಗೆ ಸಹಾಯವಾಗುತ್ತದೆ.

ಇದಲ್ಲದೆ ಮಾಗಿ ಉಳುಮೆ ಮಾಡುವುದರಿಂದ ಕಳೆಗಳ ಹತೋಟಿ ಮಾಡಬಹುದು ಮತ್ತು ಮಣ್ಣಿನಲ್ಲಿ ಅವಿತಿರುವ ಕೀಟ ಹಾಗೂ ಅವುಗಳ ತತ್ತಿಗಳು ಮತ್ತು ಕೋಶಗಳು ಸೂರ್ಯನ ಶಾಖಕ್ಕೆ ಒಡ್ಡಿಕೊಂಡು ಅವುಗಳ ಸಂತತಿ ಕಡಿಮೆ ಆಗುತ್ತದೆ ಮತ್ತು ಸಮರ್ಪಕವಾಗಿ ಹತೋಟಿ ಆಗುತ್ತದೆ.

ಮಾಗಿ ಉಳುಮೆ ಮಾಡುವ ಮೊದಲು ರೈತರು ತಮ್ಮ ಹೊಲಗಳಿಗೆ ಹೆಕ್ಟೇರಿಗೆ 10 ಟನ್‌ಗಳಷ್ಟು ಕೊಟ್ಟಿಗೆ ಅಥವಾ ಸಗಣಿ ಗೊಬ್ಬರವನ್ನು ಸಮನಾಗಿ ಹರಡಿ ನಂತರ ನೇಗಿಲಿನಿಂದ ಉಳುಮೆ ಮಾಡಿ ಗೊಬ್ಬರವನ್ನು ಮಣ್ಣಿನಲ್ಲಿ ಸೇರಿಸಬಹುದು ಎಂದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶ್ರೀ ಮಹರ್ಷಿ ಭಗೀರಥ ಜಯಂತಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಮಂಗಳವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಮಹರ್ಷಿ ಭಗೀರಥ ಜಯಂತಿಯನ್ನು ಆಚರಿಸಲಾಯಿತು.


ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಶ್ರೀ ಮಹರ್ಷಿ ಭಗೀರಥರ ಭಾವಚಿತ್ರಕ್ಕೆ ಪೂಜೆಯೊಂದಿಗೆ ಪುಷ್ಪಾರ್ಚನೆ ಸಲ್ಲಿಸಿ, ನಮಿಸಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಯಂತಿ



ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಸಮಾಜದ ಮುಖಂಡರಾದ ಸತೀಶ ಮುರಗೋಡ, ಹನುಮಂತ ಲಾತೂರ, ಲಕ್ಷ್ಮಣ ಉಪ್ಪಾರ, ಕಲ್ಲಪ್ಪ ಉಪ್ಪಾರ ಹಾಗೂ ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

## ರಫಾದಲ್ಲಿ ಇಸ್ರೇಲ್ ದಾಳಿ: ಭಾರತ ಮೂಲದ ವಿಶ್ವಸಂಸ್ಥೆ ಸಿಬ್ಬಂದಿ ಸಾವು



■ವಿಜಯಸಾಕ್ಷಿ ಸುದ್ದಿ, ದೆಹಲಿ

ಗಾಝಾ ಪಟ್ಟಿಯ ರಫಾದಲ್ಲಿ ವಾಹನದ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ ವಿಶ್ವಸಂಸ್ಥೆಯ ಸುರಕ್ಷತೆ ಮತ್ತು ಭದ್ರತಾ ಇಲಾಖೆ (ಡಿಎಸ್‌ಎಸ್)ಗಾಗಿ ಕೆಲಸ ಮಾಡುತ್ತಿದ್ದ ಭಾರತೀಯ ಸೇನೆಯ ಮಾಜಿ ಅಧಿಕಾರಿಯೊಬ್ಬರು ಮೃತಪಟ್ಟಿದ್ದಾರೆ.

ಸೋಮವಾರ ರಫಾದ ಯುರೋಪಿಯನ್ ಆಸ್ಪತ್ರೆಗೆ ಪ್ರಯಾಣಿಸುತ್ತಿದ್ದಾಗ ವಾಹನದ ಮೇಲೆ ಇಸ್ರೇಲ್ ದಾಳಿ ನಡೆಸಿದ್ದು, ಡಿಎಸ್‌ಎಸ್‌ನ ಸಿಬ್ಬಂದಿಯೊಬ್ಬರು ಸಾವನ್ನಪ್ಪಿದ್ದಾರೆ ಮತ್ತು ಇನ್ನೊಬ್ಬರು ಗಾಯಗೊಂಡಿದ್ದಾರೆ ಎಂದು ವಿಶ್ವಸಂಸ್ಥೆ (ಯುಎನ್) ಮಂಗಳವಾರ ದೃಢಪಡಿಸಿದೆ. ಸಿಬ್ಬಂದಿ ಮೇಲಿನ ದಾಳಿಯನ್ನು ಖಂಡಿಸಿರುವ ವಿಶ್ವ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ತನಿಖೆಗೆ ಆಗ್ರಹಿಸಿದ್ದಾರೆ.

ಮೃತ ಡಿಎಸ್‌ಎಸ್ ಸಿಬ್ಬಂದಿಯ ಗುರುತು ಬಹಿರಂಗವಾಗಿಲ್ಲ. ಆದರೆ, ಅವರು ಭಾರತೀಯ ಸೇನೆಯ ಮಾಜಿ ಪದಾತಿ ದಳದ ಅಧಿಕಾರಿ ಎಂದು ವರದಿಗಳು ಹೇಳಿವೆ. ಮೃತ ಅಧಿಕಾರಿ ಭಾರತದ ನ್ಯಾಷನಲ್ ಡಿಫೆನ್ಸ್ ಅಕಾಡೆಮಿಯ ಹಳೆಯ ವಿದ್ಯಾರ್ಥಿಯಾಗಿದ್ದು, 2000 ಇಸವಿಯಲ್ಲಿ ಭಾರತೀಯ ಸೇನೆಗೆ ಸೇರಿದ್ದ ಅವರು ಕೆಲ ವರ್ಷಗಳ ಹಿಂದೆ ಅಕಾಲಿಕ ನಿವೃತ್ತಿ ಪಡೆದುಕೊಂಡಿದ್ದರು.

### ರಾಜ್ಯ ನದಾಫ ಪಿಂಜಾರ ಸಂಘದ ಸಂಸ್ಥಾಪಕ ಅಲ್ ಹಜ್ ಹೆಚ್.ಇಬ್ರಾಹಿಂರ ಜನ್ಮ ದಿನಾಚರಣೆ

## ಇಬ್ರಾಹಿಂ ಸಾಹೇಬರ ಸೇವೆ ಅವಿಸ್ಮರಣೀಯ

■ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಸಾಕ್ಷಿ ಸುದ್ದಿ, ತಮ್ಮ ತನು–ಮನ–ಧನ ತ್ಯಾಗ ಮಾಡಿ ಕರ್ನಾಟಕ ರಾಜ್ಯಾದ್ಯಂತ ನದಾಫ ಪಿಂಜಾರ ಸಮುದಾಯದ ಕಟ್ಟಕಡೆಯ ವ್ಯಕ್ತಿಯನ್ನು ಸಂಪರ್ಕಿಸಿ ಸಂಘಟನೆ ಮಾಡಿ ಕರ್ನಾಟಕ ರಾಜ್ಯ ನದಾಫ ಪಿಂಜಾರ ಸಂಘವನ್ನು ಸ್ಥಾಪಿಸಿ, ಏಳ್ಗೆಗಾಗಿ ಶ್ರಮಿಸಿದ ದಿ. ಹೆಚ್. ಇಬ್ರಾಹಿಂ ಸಾಹೇಬರ ಸೇವೆ ಅವಿಸ್ಮರಣೀಯ ಎಂದು ಹೆಚ್.ಆರ್. ನದಾಫ ಅಭಿಪ್ರಾಯಪಟ್ಟರು.

ಅವರು ಕರ್ನಾಟಕ ರಾಜ್ಯ ನದಾಫ ಪಿಂಜಾರ ಸಂಘದ ಗದಗ ಜಿಲ್ಲಾ, ಗದಗ–ಬೆಟಗೇರಿ ಶಹರ ಹಾಗೂ ಗದಗ ತಾಲೂಕಾ ಗ್ರಾಮೀಣ ಘಟಕದ ಸಂಯುಕ್ತ ಆಶ್ರಯದಲ್ಲಿ ನದಾಫ ಪಿಂಜಾರ ಸಮುದಾಯದ ಅಲ್ ಹಜ್ ಡಾ. ಹೆಚ್. ಇಬ್ರಾಹಿಂ ಸಾಹೇಬರ 93ನೇ ಜನ್ಮದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದರು.

ಗದಗ ಶಹರ ಘಟಕದ ಅಧ್ಯಕ್ಷ ಮೈನುದ್ದಿನ ಬಿಜಾಪುರ, ಶಿರಹಟ್ಟಿ



ಡಾ. ವಾಯ್.ಆರ್. ಬೇಲೆರಿ ಮಾತನಾಡಿ, ಸಮುದಾಯ ಅಭಿವೃದ್ಧಿಗೊಳ್ಳಲು ಸಂಘಗಳ ಸ್ಥಾಪನೆ ಬಹಳ ಮುಖ್ಯ. ಹಾಗಾಗಿ ಸ್ಥಾಪನೆಗೊಂಡ ಸಂಘದ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳ ಮೂಲಕ ಮುಂದುವರೆಯಬೇಕು ಎಂದರು.

ತಾಲೂಕಾಧ್ಯಕ್ಷ ದಾವಲಸಾಬ ನದಾಫ, ರಾಜ್ಯ ಸಮಿತಿ ಸದಸ್ಯ ಎಂ.ಎಂ. ಗಾಡಗೋಳಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎಫ್. ಹಳ್ಯಾಳ ವಹಿಸಿದ್ದರು. ಜಿಲ್ಲಾ ಕಾರ್ಯದರ್ಶಿ ಎಂ.ಬಿ. ನದಾಫ ವಕೀಲರು ಕುರಾನ್ ಪಠಣ ಮಾಡುವುದರ ಮೂಲಕ ಪ್ರಾರ್ಥಿಸಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ವಿವಿಧ ಘಟಕಗಳ ಪದಾಧಿಕಾರಿಗಳಾದ ಎಂ.ಬಿ. ನದಾಫ, ಶೌಕತ್ ಅಲಿ ಎಂ.ಅಣ್ಣಿಗೇರಿ, ಹುಸೇನಸಾಬ ಮೌಲಾಸಾಬ ನದಾಫ, ಇಮಾಮಸಾಬ ನಬಿಸಾಬ ಹುಬ್ಬಳ್ಳಿ, ಹೆಚ್.ಆರ್. ನದಾಫ, ಎಂ.ಎಂ. ಗಾಡಗೋಳಿ, ತಾಜಬಿ ನದಾಫ, ರೇಷ್ಮಾ ಗುಜಮಾಗಡಿ, ಮೈನುದ್ದಿನ್ ಬಿಜಾಪುರ, ಜಾಕೀರ ಬಾಗಲಕೋಟ, ಮೋದಿನಸಾಬ ಅಣ್ಣಿಗೇರಿ, ನಾಸಿರ್ ಚಿಕೇನಕೊಪ್ಪ, ಫರಾಜ ಹುಬ್ಬಳ್ಳಿ, ಹಾಜಿ ರಮಜಾನಸಾಬ ಅಣ್ಣಿಗೇರಿ, ಅಪ್ಪಾಸಾಬ ನದಾಫ, ಡಿ.ಸಿ. ನದಾಫ, ದಾವಲಸಾಬ ನದಾಫ, ರಮಜಾನಸಾಬ ನದಾಫ, ಅಲ್ಲಿಸಾಬ ನದಾಫ, ಅಕ್ಬರಸಾಬ ನದಾಫ, ರಫಿಕ ಮೂಲಿಮನಿ, ರಮಜಾನಸಾಬ ಯಾವಗಲ್ಲ, ಟಿಪುಸಾಬ ನದಾಫ, ಅಬ್ದುಲಖಾದರ ಹುಬ್ಬಳ್ಳಿ, ಹಜರೆಸಾಬ ನದಾಫಗಲ್ಲಿ ಬೆಟಗೇರಿ, ಸಯ್ಯದ್ ಮತ್ತು ಸಮಾಜ ಬಾಂಧವರು ಭಾಗವಹಿಸಿದ್ದರು.

### ಮುಂಗಾರು ಮಳೆ ಪ್ರವಾಹ ಪೂರ್ವ ಸಿದ್ಧತೆ ಕುರಿತ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಮುಂಗಾರು ಮಳೆ ಪ್ರವಾಹ ಎದುರಿಸಲು ಸಿದ್ಧರಾಗಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ರಾಜ್ಯಾದ್ಯಂತ ಮುಂಬರುವ ದಿನಗಳಲ್ಲಿ ಮುಂಗಾರು ಪೂರ್ವ ಹೆಚ್ಚಿನ ಮಳೆಯಾಗುವ ಮುನ್ಸೂಚನೆ ಇದ್ದು, ಧಾರವಾಡ ಜಿಲ್ಲೆಯಲ್ಲಿ ಮಳೆಯಿಂದಾಗುವ ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಎಲ್ಲ ಅಧಿಕಾರಿಗಳು ಸನ್ನದರಾಗ ಬೇಕೆಂದು ಜಿಲ್ಲಾಧಿಕಾರಿಗಳಾದ ದಿವ್ಯ ಪ್ರಭು ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಬರ ಪರಿಸ್ಥಿತಿ ಹಾಗೂ ಮುಂಗಾರು ಮಳೆ ಪ್ರವಾಹ ಪೂರ್ವ ಸಿದ್ಧತೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹವಮಾನ ಇಲಾಖೆಯ ಮುನ್ಸೂಚನೆ ಪ್ರಕಾರ ಜೂನ್, ಜುಲೈ ಹಾಗೂ ಅಗಸ್ಟ್ ತಿಂಗಳಲ್ಲಿ ಹೆಚ್ಚಿನ ಮಳೆ ಆಗುವ ಸಂಭವವಿದೆ. ಮಳೆ, ಗುಡುಗು, ಮಿಂಚು ಪರಿಸ್ಥಿತಿಯಲ್ಲಿ ಯಾವುದೇ ರೀತಿಯ ಜೀವ ಹಾನಿಯಾಗದಂತೆ ತಡೆಯಲು ಮುಂಜಾಗೃತಾ ಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಪ್ರಚಾರ ಕೈಗೊಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮಗಳಲ್ಲಿ ಕೆರೆಗಳು ಭರ್ತಿಯಾಗುವ ಹಾಗೂ ದುರ್ಬಲ ಬಂಡ/ಬದುಗಳನ್ನು ಮುಂಜಾಗೃತವಾಗಿ ಪರಿಶೀಲಿಸಬೇಕು. ಅಗತ್ಯವಿದ್ದಲ್ಲಿ ಈಗಲೇ ದುರಸ್ಥಿ ಕಾರ್ಯ ಕೈಗೊಳ್ಳಬೇಕೆಂದರು. 2019 ಹಾಗೂ 2021ರಲ್ಲಿ ಜಿಲ್ಲೆಯ 78 ಗ್ರಾಮಗಳನ್ನು ಪ್ರವಾಹ ಪೀಡಿತ ಎಂದು ಗುರುತಿಸಲಾಗಿದ್ದು, ತಹಸೀಲ್ದಾರರು ಹಾಗೂ ತಾ.ಪಂ ಇಓಗಳು ತಮ್ಮ ವ್ಯಾಪ್ತಿಯ ಪ್ರವಾಹ ಸಂಭವನೀಯ ಗ್ರಾಮಗಳಿಗೆ ಭೇಟಿ




ನೀಡಿ ಪರಿಶೀಲಿಸಬೇಕು. ಮುಂಜಾಗೃತಾ ಕ್ರಮಗಳು ಹಾಗೂ ಪರ್ಯಾಯ ವ್ಯವಸ್ಥೆಗಳ ಬಗ್ಗೆ ವರದಿ ಸಿದ್ಧಪಡಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲ ರಾಜ ಕಾಲುವೆ ಹಾಗೂ ಚರಂಡಿಗಳನ್ನು ತಕ್ಷಣವೇ ಸ್ವಚ್ಛಗೊಳಿಸಬೇಕು ಹಾಗೂ ನೀರು ಸರಾಗವಾಗಿ ಹರಿದು ಹೋಗಲು ಕ್ರಮ ಕೈಗೊಳ್ಳುವಂತೆ ಮಹಾನಗರ ಪಾಲಿಕೆ ಆಯುಕ್ತರಾದ ಈಶ್ವರ ಉಳಾಗಡ್ಡಿ ಅವರಿಗೆ ತಿಳಿಸಿದರು. ರಸ್ತೆ ಬದಿಯಲ್ಲಿ ಅಪಾಯಕಾರಿ ಗಿಡ-ಮರಗಳನ್ನು ಹಾಗೂ ಟೊಂಗೆಗಳನ್ನು ಈಗಲೇ ತೆರವುಗೊಳಿಸಿ, ಮ್ಯಾನ್‌ಹೋಲ್‌ಗಳನ್ನು ತಕ್ಷಣವೇ ಮುಚ್ಚಲು ಕ್ರಮ ಕೈಗೊಳ್ಳುವಂತೆ

> ಜಿಲ್ಲೆಯಲ್ಲಿ ಸದ್ಯ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ 78 ಖಾಸಗಿ ಕೊಳವೆ ಬಾವಿಗಳಿಂದ 51 ಗ್ರಾಮಗಳಲ್ಲಿ ನೀರು ಪೂರೈಸಲಾಗುತ್ತಿದೆ. ನವಿಲುತೀರ್ಥ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆ ಮೂಲಕ ಒಟ್ಟು 58 ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಲು ಮೇ 14ರಿಂದ 10 ದಿನಗಳ ಕಾಲ ನೀರು ಹರಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ತಿಳಿಸಿದರು.

ಹೆಸ್ಕಾಂ ಅಧಿಕಾರಿಗಳು ಅಪಾಯಕಾರಿ ವಿದ್ಯುತ್ ಕಂಬಗಳ ಬಗ್ಗೆ ಈಗಲೇ ಗಮನ ವಹಿಸಿ, ಸ್ಥಳಾಂತರಗೊಳಿಸಬೇಕು. ವಿದ್ಯುತ್ ಸಂಪರ್ಕದಿಂದ ಯಾವುದೇ ಅನಾಹುತಗಳು ಆಗದಂತೆ ವಿವಿಧ ಸ್ಥಳನ್ನು ಗುರುತಿಸಿ, ಈಗಲೇ ಕ್ರಮಕೈಗೊಳ್ಳಬೇಕು ಎಂದು ತಿಳಿಸಿದರಲ್ಲದೆ, ಎಲ್ಲ ತಾಲೂಕಾ ಟಾಸ್ಕ್‌ಫೋರ್ಸ್‌ಗಳು ಈಗಲೇ ಮುಂಜಾಗೃತೆಯಾಗಿ ಸಿದ್ಧಗೊಳ್ಳಬೇಕೆಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಉಪವಿಭಾಗಾಧಿಕಾರಿ ಶಾಲಂ ಹುಸೇನ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಕಿರಣಕುಮಾರ ಎಂ., ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ವಿಜಯ ಅಜೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ರೈತ ಆತ್ಮಹತ್ಯೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಬಟ್ಟೂರ ಗ್ರಾಮದ ರೈತ ಮೈಲಾರೆಪ್ಪ ಮೇಟಿ (64) ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ವರದಿಯಾಗಿದೆ.

ಮೃತ ರೈತ ತನ್ನ ಹೆಸರಿನಲ್ಲಿದ್ದ 6 ಎಕರೆ 19 ಗುಂಟೆ ಹೊಲದ ಮೇಲೆ ಬೆಳೆಸಾಲ ಮಾಡಿದ್ದು, ಪಟ್ಟಣದ ಸಿಂಡಿಕೇಟ್ ಬ್ಯಾಂಕಿನಲ್ಲಿ 6.50 ಲಕ್ಷ ರೂ ಸಾಲ ಪಡೆದುಕೊಂಡಿದ್ದ. ಅಲ್ಲದೆ ಕೈಗಡ ಸಾಲವನ್ನು ಮಾಡಿಕೊಂಡಿದ್ದ ಎನ್ನಲಾಗಿದೆ. ಆದರೆ ಮಳೆಯ ಕೊರತೆಯಿಂದ ಬೆಳೆ ಸರಿಯಾಗಿ ಬಾರದ್ದರಿಂದ ಅದನ್ನೇ ಮನಸ್ಸಿಗೆ ಹಚ್ಚಿಕೊಂಡು ಸೋಮವಾರ ಮನೆಗೆ ಹೊಂದಿಕೊಂಡಿರುವ ದನದ ಕೊಟ್ಟಿಗೆಯ ತಗಡಿನ ಮೇಲ್ಚಾವಣಿಗೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಲಕ್ಷ್ಮೇಶ್ವರ ಪೊಲೀಸ್ ಠಾಣೆಯ ಪಿಎಸ್‌ಐ ಈರಪ್ಪ ರಿತ್ತಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಂಡಿದ್ದಾರೆ.

# ಸಾಧಕರಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಏಶಿಯಾ ಇಂಟರ್‌ನ್ಯಾಶನಲ್ ಕಲ್ಚರ್ ಅಕಾಡೆಮಿ ಇತ್ತೀಚೆಗೆ ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ಕಾರ್ಮಿಕ ಘಟಕದ ರಾಜ್ಯಾಧ್ಯ ಡಾ.ಶಿವಾನಂದ ಹಿರೇಮಠ, ಜಿಲ್ಲಾಧ್ಯಕ್ಷ ಡಾ. ಶಿವಕುಮಾರ ರಾಮನಕೊಪ್ಪ ಹಾಗೂ ಸಾಮಾಜಿಕ ಕಾರ್ಯಕರ್ತರಾದ ಡಾ. ಎಸ್. ಎಸ್. ರಡ್ಡೇರ ಅವರಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿ ನೀಡಿ ಗೌರವಿಸಿತು.

ಈ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಗಣ್ಯ ವ್ಯಾಪಾರಸ್ಥರ ನಿಯೋಗ ಅವರನ್ನು ಸನ್ಮಾನಿಸಿ, ಗೌರವಿಸಿ ಶುಭ ಹಾರೈಸಿತು. ಈ ಸಂದರ್ಭದಲ್ಲಿ ಗಣ್ಯ ಉದ್ದಿಮೆದಾರರು, ಬಿಜೆಪಿ ಜಿಲ್ಲಾದ್ಯಕ್ಷ ರಾಜು ಕುರಡಗಿ, ಸದು ಮದರಿಮಠ, ತಾತನಗೌಡ್ರ ಪಾಟೀಲ್, ಜಯದೇವ ಮೆಣಸಗಿ, ಶೇಕಣ್ಣ ಕವಳಿಕಾಯಿ, ಬಸವರಾಜ ಹಿರೇಹಡಗಲಿ, ಪ್ರಭು ದಂಡಾವತಿಮಠ, ಶಿವಕಾಳಿಮಠ, ಪ್ರಭಾಕರ ಹೆಬಸೂರ, ಎಮ್.ಎಸ್. ಪರ್ವತಗೌಡರ, ಈರಮ್ಮ ಹಿರೇಮಠ, ಅಬಿಷೇಕ, ಆಶ್ವಿನಿ, ಶಿವಲಿಂಗಶಾಸ್ತ್ರಿ, ಯು. ಆರ್. ಭೂಸನೂರಮಠ ಸೇರಿದಂತೆ ಹಲವರಿದ್ದರು.

### ಕ್ರಯ ಪತ್ರ ಬರೆದುಕೊಡದ ಬಿಲ್ಡರ್ಸ್‌ನಿಂದ ಸೇವಾ ನ್ಯೂನತೆ

# ಗೋಲ್ಡನ್ ಹೋಮ್ಸ್ ಬಿಲ್ಡರ್ಸ್‌ಗೆ ಆದೇಶ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಗದಗ ಹಾಗೂ ಹೊಸಪೇಟೆಯ ನಿವಾಸಿಗಳಾದ ನೇಮಿಚಂದ್‌ಜೈನ್ ಹಾಗೂ ಆನಂದ ಮಲ್ಲಪ್ಪ ಇವರು 2010ನೇ ಇಸವಿಯಲ್ಲಿ ಗೋಲ್ಡನ್ ಹೋಮ್ಸ್ ಬಿಲ್ಡರ್ಸ್ ಕಡೆಯಿಂದ ತಲಾ ರೂ.25 ಲಕ್ಷ 60 ಸಾವಿರ ರೂಪಾಯಿಗಳಿಗೆ ಪ್ಲಾಟ್‌ಗಳನ್ನು ಖರೀದಿಸಿದ್ದರು. ಈ ಬಗ್ಗೆ ಉಭಯತರರ ಮಧ್ಯೆ ಖರೀದಿ ಒಪ್ಪಂದ ಪತ್ರ ಆಗಿತ್ತು. ಪ್ಲಾಟ್ ಕಟ್ಟಿಸಿ ಸ್ವಾಧೀನತೆ ಕೊಟ್ಟಿದ್ದರೂ ಸದರಿ ಬಿಲ್ಡರ್ಸ್ ದೂರುದಾರರಿಗೆ ನೋಂದಾಯಿತ ಕ್ರಯಪತ್ರ ಮಾಡಿಕೊಟ್ಟಿರಲಿಲ್ಲ.

ಈ ಕಾರಣದಿಂದ ಗೋಲ್ಡನ್ ಹೋಮ್ಸ್ ಬಿಲ್ಡರ್ಸ್‌ನವರು ಸೇವಾ ನ್ಯೂನತೆ ಎಸಗಿ ತಮಗೆ ಮೋಸ ಮಾಡಿದ್ದಾರೆ ಎಂದು ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರುದಾರರು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ತಮ್ಮ ದೂರುಗಳನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ವಿಶಾಲಾಕ್ಷಿ ಅ.ಬೋಳಶೆಟ್ಟಿ ಮತ್ತು ಪ್ರಭು ಸಿ.ಹಿರೇಮಠ ಸದಸ್ಯರು, ದೂರುದಾರರು ಪೂರ್ತಿ ಹಣಕೊಟ್ಟ ಮೇಲೆ ಗೋಲ್ಡನ್ ಹೋಮ್ಸ್ ಬಿಲ್ಡರ್ಸ್‌ನವರು ಪ್ಲಾಟ್ ನಿರ್ಮಿಸಿ ದೂರುದಾರರಿಗೆ ಸ್ವಾಧೀನತೆ ಕೊಟ್ಟಿದ್ದರು. ಆ ಬಗ್ಗೆ ನೋಂದಾಯಿತ ಕ್ರಯಪತ್ರ ಮಾಡಿಕೊಡದೇ ಇರುವುದು ಸೇವಾ ನ್ಯೂನತೆ ಆಗುತ್ತದೆ ಎಂದು ಅಭಿಪ್ರಾಯಪಟ್ಟು ತೀರ್ಪು ನೀಡಿದೆ. ತೀರ್ಪು ನೀಡಿದ 45 ದಿವಸಗಳ ಒಳಗಾಗಿ ದೂರುದಾರರ ಪರವಾಗಿ ನೋಂದಾಯಿತ ಕ್ರಯಪತ್ರ ಮಾಡಿಕೊಡುವಂತೆ ಆದೇಶಿಸಿದೆ. ಅದಕ್ಕೆ ತಪ್ಪಿದ್ದಲ್ಲಿ ಕೋರ್ಟ್ ಕಮೀಷನರ್ ಮೂಲಕ ದೂರುದಾರರು ತಮ್ಮ ಸ್ವಂತ ಖರ್ಚಿನಲ್ಲಿ ನೋಂದಾಯಿತ ಕ್ರಯಪತ್ರ ಪಡೆಯಲು ಅರ್ಹರಿದ್ದಾರೆಂದು ಆಯೋಗ ತನ್ನ ತೀರ್ಪಿನಲ್ಲಿ ತಿಳಿಸಿದೆ.

# ಕೌಟುಂಬಿಕ ವ್ಯವಸ್ಥೆಯಲ್ಲಿ ತಾಯಿಯ ಪಾತ್ರ ಅನನ್ಯ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಒಂಬತ್ತು ತಿಂಗಳು ಹೊತ್ತು-ಹೆತ್ತು, ತನ್ನ ಜೀವಕ್ಕಿಂತ ಹೆಚ್ಚಾಗಿ ಪ್ರೀತಿಸುವ ಹಾಗೂ ಪೋಷಿಸುವ ತಾಯಿಗೆ ಸಮಾನವಾದ ಮತ್ತೊಬ್ಬ ವ್ಯಕ್ತಿ ಜಗತ್ತಲ್ಲಿ ಯಾರೂ ಇಲ್ಲ ಎಂದು ಕುರ್ತಕೋಟಿ ಗ್ರಾಮ ಪಂಚಾಯಿತಿ ಸದಸ್ಯ ಪುಷ್ಪಾ ನಾಗಾವಿ ಹೇಳಿದರು.

ಅವರು ಪಟ್ಟಣದಲ್ಲಿ ತಾಯಂದಿರ ದಿನಾಚರಣೆಯಲ್ಲಿ ತಾಯಂದಿರನ್ನು ಸನ್ಮಾನಿಸಿ ಮಾತನಾಡಿ, ತಾಯಂದಿರು ತಮ್ಮ ಜೀವನವನ್ನು ತನ್ನ ಮಕ್ಕಳಿಗಾಗಿ ಶ್ರಮಿಸಿ ಸಲುಹಿ ಸಾಕುವುದಲ್ಲದೇ ಅವರ ಭವಿಷ್ಯಕ್ಕೆ ಭದ್ರ ಬುನಾದಿಯಾಗಿ ಕೊನೆಯುಸಿರು ಇರುವವರೆಗೂ ಕಾಪಾಡುವವಳು ತಾಯಿ. ತಾಯಿ ಇಲ್ಲದೇ ಜೀವನ ನಡೆಸುವುದು ಅಸಾಧ್ಯ. ತಾಯಿಯನ್ನು ಪ್ರತಿಯೊಬ್ಬರೂ ಗೌರವಿಸಬೇಕು, ಪ್ರೀತಿಸಬೇಕು, ಅವರ ವೃದ್ಯಾಪ ಜೀವನದಲ್ಲಿ ಅವರನ್ನು ನಮ್ಮ ಮಕ್ಕಳಂತೆ ಸಲಹಬೇಕು ಎಂದರು.

ಸಾವಿತ್ರಿ ಮುಸ್ಕಿನಭಾವಿ, ಪಾರವ್ವ ಪಟ್ಟಣಶೇಟ್ಟಿ, ವಿಜಯಲಕ್ಷ್ಮಿ ಪಟ್ಟಣಶೆಟ್ಟಿ, ಶೋಭಾ ಸಿದ್ದನಗೌಡರ, ಜ್ಯೋತಿ ಬಡ್ನಿ, ಮಹೇಶ್ವರಿ ಶಿದ್ನಾಳ, ದೀಪಾ ಮುಸ್ಕಿನಭಾವಿ, ಸುಜಾತಾ ಅಂಗಡಿ, ಸಂಗೀತಾ ರೇವಣ್ಣವರ, ಜಯಶ್ರೀ ಯಲಿಗಾರ, ನೀಲಮ್ಮಾ ಇಚ್ಚಂಗಿ ಇದ್ದರು.

### ಹೆಚ್ ಡಿ ರೇವಣ್ಣ ಬಂಧನ ರಾಜಕೀಯ ಪ್ರೇರಿತ, ಇದರ ಹಿಂದಿರುವ ದೊಡ್ಡ ತಿಮಿಂಗಿಲ ಬಂಧನ ಯಾವಾಗ: ಕುಮಾರಸ್ವಾಮಿ ಪ್ರಶ್ನೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮಾಜಿ ಸಚಿವ ಹೆಚ್ ಡಿ ರೇವಣ್ಣ ಅವರ ಬಂಧನ ರಾಜಕೀಯ ಪ್ರೇರಿತ. ಇದೆಲ್ಲದರ ಹಿಂದೆ ದೊಡ್ಡ ತಿಮಿಂಗಿಲವೇ ಇದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಕಿಡಿಕಾರಿದರು.

ಬೆಂಗಳೂರಿನ ತಮ್ಮ ನಿವಾಸದ ಬಳಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿ, "ದೇವೇಗೌಡರ ಕುಟುಂಬಕ್ಕೆ ಕಳಂಕ ತರಲು ಈ ರೀತಿ ಮಾಡಿದ್ದಾರೆ. ಕುಮಾರಸ್ವಾಮಿ ಅವರು ರೇವಣ್ಣ ಕುಟುಂಬವನ್ನು ಮುಗಿಸಲು ನೋಡುತ್ತಿದ್ದಾರೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ನಾನು ನ್ಯಾಯದ ಪರ ಇದ್ದೇನೆ, ನೊಂದ ಮಹಿಳೆಯರ ಪರ ಇದ್ದೇನೆ" ಎಂದರು.

"ವಕೀಲರಾದ ದೇವರಾಜೇಗೌಡರನ್ನು ಈಗ ಒಂದು ಪ್ರಕರಣದಲ್ಲಿ ಸಿಲುಕಿಸಿ ಬಂಧಿಸಿದ್ದು ಯಾಕೆ? ಒಂದು ತಿಂಗಳಿನಿಂದ ಏನೆಲ್ಲಾ ಬೆಳವಣಿಗೆ ಆಯಿತು? ಆಡಿಯೋ ಮೂಲಕ ಸಿಕ್ಕಿಬಿದ್ದ ದೊಡ್ಡ ತಿಮಿಂಗಲವನ್ನು ಬಿಟ್ಟು ದೇವರಾಜೇಗೌಡರನ್ನು ಬಂಧನ ಮಾಡಿದ್ದಾರೆ" ಎಂದು ಅತೃಪ್ತಿ ವ್ಯಕ್ತಪಡಿಸಿದರು.

ಸುದ್ದಿ ನಿರಂತರವಾಗಿ ಉಚಿತವೇ ಆಗಿರುವುದು ಹೇಗೆ ಸಾಧ್ಯ? ಅದಕ್ಕೆ ನಿಮ್ಮ ಬೆಂಬಲವೂ ನಿರಂತರವಾಗಿ ಇದ್ದಾಗ ಮಾತ್ರ ಸಾಧ್ಯ. ಚಂದಾದಾರರಾಗಿ ಆ ಮೂಲಕ ಸತ್ಯ, ನ್ಯಾಯ, ಪ್ರೀತಿ ಮೌಲ್ಯಗಳನ್ನು ಎಲ್ಲರಿಗೂ ಹರಡಲು ಜೊತೆಯಾಗಿ.


"ವಿಡಿಯೋದಲ್ಲಿ ಬಂದಂತಹ ಮಹಿಳೆಯರ ಕುಟುಂಬಗಳ ಬಗ್ಗೆ ಸರಕಾರಕ್ಕೆ ಅನುಕಂಪ ಎನ್ನುವುದು ಇದೆಯಾ? ಈ ಪ್ರಕರಣಕ್ಕೆ ಸಂಬಂಧಿಸಿ ನಾನು ಯಾರನ್ನೂ ವಹಿಸಿಕೊಳ್ಳುವ ಪ್ರಶ್ನೆ ಇಲ್ಲ. ಮಾಹಿತಿ ತಂತ್ರಜ್ಞಾನದ ಈ ಕಾಲದಲ್ಲಿ ಅಪರಾಧಿ ನಿರಪರಾಧಿ ಆಗುತ್ತಾನೆ. ಸರಕಾರಕ್ಕೆ ಬದ್ಧತೆ ಇದ್ದರೆ ತನಿಖೆಯನ್ನು ಸೂಕ್ತ ರೀತಿಯಲ್ಲಿ ನಡೆಸಲಿ. ಅದನ್ನು ಬಿಟ್ಟು ರೇವಣ್ಣ ಸುತ್ತ ತನಿಖೆ ಗಿರಕಿ ಹೊಡೆಯುವ ಅಗತ್ಯವಿಲ್ಲ" ಎಂದರು.

"ಮಹಿಳೆಯರಿಗೆ ನ್ಯಾಯ ಸಿಗುವಂತೆ ಆಗಬೇಕು. ರಾಷ್ಟ್ರೀಯ ಮಹಿಳಾ ಆಯೋಗಕ್ಕೆ ಓರ್ವ ನೊಂದ ಮಹಿಳೆ ದೂರು ಕೊಟ್ಟಿದ್ದಾರೆ. ಆ ಹೆಣ್ಣುಮಗಳಿಗೆ ಹೆದರಿಸಿ ಅವರಿಂದ ದೂರು ಪಡೆಯಲು ಪ್ರಯತ್ನ ಮಾಡಿದ್ದಾರೆ. ಅವರಿಗೆ ಹೆದರಿಸಿ ಬೆದರಿಸಿದವರು ಯಾರು? ಮಫ್ತಿಯಲ್ಲಿ ಅವರ ಮನೆ ಬಳಿ ಹೋಗಿ ಹೆದರಿಸಿದ್ದು ಯಾರು? ಇದೆಲ್ಲಾ ಎಸ್‌ಐಟಿಗೆ ಗೊತ್ತಾ" ಎಂದು ಪ್ರಶ್ನಿಸಿದರು.

"ಕೆಲವೇ ದಿನಗಳಲ್ಲಿ ಎಲ್ಲ ಮಾಹಿತಿ ಹೊರಗೆ ಬರಲಿದೆ. ಮಹಿಳೆಯರಿಗೆ ಬೆದರಿಸಿದ್ದು, ಧಮ್ಕಿ ಹಾಕಿದ್ದು ಎಲ್ಲವೂ ಆಚೆ ಬರಲಿದೆ. ನೀವು ಅದರ ಬಗ್ಗೆ ಏನು ಕ್ರಮ ತಗೊಂಡಿದ್ದೀರಿ ಗೃಹ ಸಚಿವರೇ?" ಎಂದು ಡಾ ಜಿ ಪರಮೇಶ್ವರ ಅವರನ್ನು ಪ್ರಶ್ನಿಸಿದರು.

### ಮಟುವಾ ಸಮುದಾಯಕ್ಕೆ ಪೌರತ್ವ ಸಿಗಲಿದೆ; ಮಮತಾ ಬ್ಯಾನರ್ಜಿಯಿಂದ ಸಿಎಎ ಜಾರಿ ತಡೆಯಲು ಸಾಧ್ಯವಿಲ್ಲ: ಅಮಿತ್ ಶಾ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**



ಪೌರತ್ವದ ಕುರಿತು ಮಟುವಾ ಸಮುದಾಯದ ಕಳವಳವನ್ನು ಪರಿಹರಿಸುವ ಪ್ರಯತ್ನ ಮಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ. "ಸಮುದಾಯವು ಸಿಎಎ ಅಡಿಯಲ್ಲಿ ಪೌರತ್ವವನ್ನು ಪಡೆಯುತ್ತಾರೆ; ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅದರ ಬಗ್ಗೆ ಅಪಪ್ರಚಾರ ಮಾಡುತ್ತಿದ್ದಾರೆ" ಎಂದು ಆರೋಪಿಸಿದರು.

ಮಟುವಾ ಸಮುದಾಯದ ಭದ್ರಕೋಟೆ ಬೊಂಗಾವ್‌ನಲ್ಲಿ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಶಾ, "ಮಮತಾ ಬ್ಯಾನರ್ಜಿಯವರು ಬಂಗಾಳದಲ್ಲಿ ಪೌರತ್ವ ತಿದ್ದುಪಡಿ ಕಾಯಿದೆಯ ಅನುಷ್ಠಾನವನ್ನು ಎಂದಿಗೂ ತಡೆಯಲು ಸಾಧ್ಯವಿಲ್ಲ. ಏಕೆಂದರೆ, ಇದು ಕೇಂದ್ರ ಸರ್ಕಾರದ ಕಾನೂನಾಗಿದೆ. ನನ್ನ ನಿರಾಶ್ರಿತ ಸಹೋದರರು ಭಾರತದ ನಾಗರಿಕರಾಗುವುದನ್ನು ವಿಶ್ವದ ಯಾವುದೇ ಶಕ್ತಿ ತಡೆಯಲು ಸಾಧ್ಯವಿಲ್ಲ; ಇದು ಮೋದಿಯವರ ಭರವಸೆ. ಪೌರತ್ವವು ಕೇಂದ್ರ ಸರ್ಕಾರದ ವಿಶೇಷ ಅಧಿಕಾರದ ಅಡಿಯಲ್ಲಿ ಬರುತ್ತದೆ, ರಾಜ್ಯ ಸರ್ಕಾರಗಳಲ್ಲ ಎಂಬುದನ್ನು ಮಮತಾ ಬ್ಯಾನರ್ಜಿ ನೆನಪಿಟ್ಟುಕೊಳ್ಳಬೇಕು" ಎಂದು ಅವರು ಹೇಳಿದರು.

"ಸಿಎಎ ಅಡಿಯಲ್ಲಿ ಪೌರತ್ವಕ್ಕಾಗಿ ಅರ್ಜಿ ಸಲ್ಲಿಸುವ ಯಾರಾದರೂ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂದು ಮಮತಾ ಬ್ಯಾನರ್ಜಿ ಸುಳ್ಳು ಹೇಳುತ್ತಿದ್ದಾರೆ. ಮಟುವಾ ಸಮುದಾಯದ ಜನರಿಗೆ ಯಾರಿಗೂ ತೊಂದರೆ ಆಗುವುದಿಲ್ಲ ಎಂದು ಭರವಸೆ ನೀಡಲು ಬಂದಿದ್ದೇನೆ. ನೀವು ಪೌರತ್ವವನ್ನು ಪಡೆಯುತ್ತೀರಿ ಮತ್ತು ದೇಶದಲ್ಲಿ ಗೌರವದಿಂದ ಬದುಕಲು ಸಾಧ್ಯವಾಗುತ್ತದೆ" ಎಂದು ಅವರು ಹೇಳಿದರು.

### ಬಸವ ಯೋಗ ಮಂದಿರದಲ್ಲಿ ಬಸವ ಜಯಂತಿ ಕಾರ್ಯಕ್ರಮ

# ವಿದ್ಯಾರ್ಥಿಗಳ ಶ್ರೇಯಸ್ಸಿಗೆ ಬಸವಣ್ಣನವರ ವಚನಗಳು ಸಹಕಾರಿ



**■ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳ ಒಳಿತಿಗಾಗಿ ಸಮಾಜ ಮತ್ತು ಸರಕಾರಗಳು ನೂರಾರು ಸೌಲಭ್ಯಗಳನ್ನು ಕಲ್ಪಿಸಿವೆ. ವಿದ್ಯಾರ್ಥಿಗಳು ವಿದ್ಯಾವಂತರಾಗಲೆಂದು ಅವರಿಗೆ ಊಟ, ವಸತಿ, ವಸ್ತ್ರ, ಪುಸ್ತಕ, ವಾಹನ ಏನೆಲ್ಲ ಅಗತ್ಯವಿದೆಯೋ ಅವನ್ನೆಲ್ಲ ಸರಕಾರವು ಉಚಿತವಾಗಿ ಪೂರೈಸುತ್ತಿದೆ. ಆದರೂ ಇಂದು ವಿದ್ಯಾರ್ಥಿಗಳು ಹೆಚ್ಚಿನ ಸಾಧನೆಗೆ ಮುನ್ನಡೆಯುತ್ತಿಲ್ಲ. ಬೇಡದ ಕಾರ್ಯಗಳಲ್ಲಿ ತೊಡಗುತ್ತಿದ್ದು, ಇದಕ್ಕೆ ಕಾರಣ ಅವರಲ್ಲಿ ನೈತಿಕ ಬಲ ಇಲ್ಲದಿರುವುದಾಗಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶ್ರೇಯಸ್ಸಿಗೆ ಬಸವಣ್ಣನವರ

> ಅಧ್ಯಕ್ಷತೆ ವಹಿಸಿದ್ದ ನಗರ ಯೋಜನಾ ಇಲಾಖೆಯ ಸಹಾಯಕ ನಿರ್ದೇಶಕ ಅಂದಾನಯ್ಯ ಹಿತ್ತಲಮನಿ (ಮಣ್ಣೂರಮಠ) ಮಾತನಾಡಿ, ಬಸವಣ್ಣನವರು ಈ ನಾಡಿಗೆ, ಕನ್ನಡ ಸಾಹಿತ್ಯಕ್ಕೆ ಅಪೂರ್ವ ಕೊಡುಗೆಯಾಗಿರುವ ವಚನಗಳು ಮಾನವೀಯ ಮೌಲ್ಯಗಳ ರಕ್ಷಣೆಗೆ ಭದ್ರಕೋಟೆಯಾಗಿವೆ ಎಂದು ಅನುಭವ ನುಡಿಗಳನ್ನು ತಿಳಿಸಿದರು.

ವಚನಗಳು ಸಹಕಾರಿಯಾಗಿವೆ ಎಂದು ವಿದ್ಯಾರ್ಥಿ ನಚಿಕೇತ ಸಣ್ಣೆಲಿ ಅಭಿಪ್ರಾಯಪಟ್ಟರು.

ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಹಾಗೂ ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆಗಳ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಜರುಗಿದ ವಿಶ್ವಗುರು ಬಸವಣ್ಣನವರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಮಾತನಾಡಿ, 12ನೇ ಶತಮಾನದಲ್ಲಿ ಶರಣರು ತಿಳಿಸಿದ ಕಾಯಕ-ದಾಸೋಹ ತತ್ವಾಚರಣೆಗಳನ್ನು ನಾವಿಂದು ಪಾಲಿಸಿದರೆ ಕಲ್ಯಾಣ ರಾಜ್ಯ ಸ್ಥಾಪನೆಯಾಗುವಲ್ಲಿ ಸಂದೇಹವಿಲ್ಲವೆಂದರು.

ಮುಖ್ಯ ಅತಿಥಿ ನಾಗರಾಜ ಅಡವಿ, ತಾಲೂಕಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಸುಲೋಚನಾ ಐಹೊಳ್ಳಿ ಮಾತನಾಡಿದರು. ವಾಸುದೇವರಡ್ಡಿ ಮೇಕಳಿ, ವಿವೇಕ ಹಿತ್ತಲಮನಿ, ಚೇತನ ಚುಂಚಾ, ಪಾರ್ವತಿ ಭೂಮಾ, ಗಿರಿಜಾ ನಾಲತ್ವಾಡಮಠ, ಸುಮಾ ಸುರೇಬಾನ, ಮಹಾದೇವಿ ಚರಂತಿಮಠ, ಗಿರಿಜಾ ಅಂಗಡಿ ಇನ್ನಿತರರು ಪಾಲ್ಗೊಂಡಿದ್ದರು.

ವಿಜಯಾ ಚನ್ನಶೆಟ್ಟಿ ವಚನ ಪ್ರಾರ್ಥನೆ ಹೇಳಿದರು.

ಡಾ. ಎಂ.ವಿ. ಐಹೊಳ್ಳಿ ಸ್ವಾಗತಿಸಿದರು. ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿ ತಿಳಿಸಿ ಕಾರ್ಯಕ್ರಮ ನಿರೂಪಿಸಿದರು. ಪ್ರಕಾಶ ಬೇಲಿ ವಂದಿಸಿದರು.

### ಬಾಲ ವಿನಾಯಕ ವಿದ್ಯಾನಿಕೇತನ ವಿದ್ಯಾರ್ಥಿಗಳ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಿಬಿಎಸ್‌ಸಿ ಪಠ್ಯಕ್ರಮದ 10ನೇ ತರಗತಿಯ ಫಲಿಂತಾಂಶ ಪ್ರಕಟವಾಗಿದ್ದು, ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯು ನೂರಕ್ಕೆ ನೂರರಷ್ಟು ಫಲಿತಾಂಶವನ್ನು ಪಡೆದಿದೆ. 15 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 14 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, 14 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಮತ್ತು 3 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ತೇರ್ಗಡೆಯಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ. ಬಾಲಾಜಿ ಪಾಣಗಂಟಿ ಶೇ. 88.6 ಅಂಕದೊಂದಿಗೆ ಶಾಲೆಗೆ ಪ್ರಥಮ, ಶ್ರೇಯಾ ಮುನವಳ್ಳಿ ಶೇ. 88.4 ಫಲಿತಾಂಶದೊಂದಿಗೆ ದ್ವಿತೀಯ, ಫಾಲ್ಗುಣಿ ವಾರ್ಕರ ಮತ್ತು ಶ್ರೀಗೌರಿ ಎಚ್.ಎಲ್. ಶೇ. 87.6 ಅಂಕದೊಂದಿಗೆ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಸಾಧಕ ವಿದ್ಯಾರ್ಥಿಗಳನ್ನು ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು, ಉಪ ಪ್ರಾಚಾರ್ಯರು, ಪಾಲಕರು ಮತ್ತು ಶಿಕ್ಷಕರು ಅಭಿನಂದಿಸಿದ್ದಾರೆ.

## ಸಾಧಕ ವಿದ್ಯಾರ್ಥಿನಿ ಸೌಜನ್ಯ ಶಿಡ್ಲನ್ನವರಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಲಿಂಗಧಾಳದ ಸರ್ಕಾರಿ ಪ್ರೌಢಶಾಲೆಯ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಹಾಗೂ ಶಾಲಾ ಗುರುಬಳಗದ ಸಹಯೋಗದಲ್ಲಿ 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗದಗ ಜಿಲ್ಲೆಗೆ ಕನ್ನಡ ಮಾಧ್ಯಮದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲೆಗೆ ಕೀರ್ತಿ ತಂದ ಶಾಲೆಯ ಪ್ರತಿಭಾವಂತ ವಿದ್ಯಾರ್ಥಿನಿ ಸೌಜನ್ಯ ಶಿಡ್ಲನ್ನವರ ಅವರ ನಿವಾಸಕ್ಕೆ ತೆರಳಿ ಸನ್ಮಾನಿಸಿ ಅಭಿನಂದಿಸಲಾಯಿತು.

ಸಾಧನೆಗೈದ ವಿದ್ಯಾರ್ಥಿನಿಯ ಕುರಿತು ಎಸ್‌ಡಿಎಂಸಿ ಅಧ್ಯಕ್ಷ ಉಮೇಶ್ ಗುಳೇದ, ಮುಖ್ಯೋಪಾಧ್ಯಾಯೆ ಪಾರ್ವತಿ ಎಸ್.ಸಜ್ಜನ, ಮರಿಯಪ್ಪ ಕೊಂಡಿಕೊಪ್ಪ, ರಾಜು ಜಾನೋಪಂತರ, ಶಾಂತಕುಮಾರ ಭಜಂತ್ರಿ ಸಂದರ್ಭೋಚಿತವಾಗಿ ಮಾತನಾಡಿದರು.

ಶಾಲೆಗೆ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಾದ ಕೀರ್ತಿ ಲಿಂಗನಗೌಡ್ರ ಮತ್ತು ದೇವರಾಜ್ ಗೋನಾಳ, ಉನ್ನತ ದರ್ಜೆಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಾದ ಸುಕನ್ಯಾ ತೋರಗಲ್, ಸ್ಪಂದನ ನವಲಗುಂದ ಇವರನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಉಪಾಧ್ಯಕ್ಷೆ ಜಯಶ್ರೀ ಬಡಿಗೇರ, ಸಹ ಶಿಕ್ಷಕರಾದ ಆರ್.ಎಂ. ಬಿಂಗಿ, ಆರ್.ವೈ. ಮ್ಯಾಗೇರಿ, ಆನಂದಕುಮಾರ್ ಟಿ.ಮೇಗಡಿ, ಮರಿಯಪ್ಪ ಕೊಂಡಿಕೊಪ್ಪ, ರಾಜು ಜಾನೋಪಂತರ, ಗುರುಸಿದ್ದಪ್ಪ ಅಂಗಡಿ, ವೀರಪ್ಪ ಕೌತಾಳ, ಗ್ರಾ.ಪಂ ಸದಸ್ಯೆ ಹನುಮವ್ವ ಶಿಡ್ಲಣ್ಣವರ ಹಾಗೂ ಕುಟುಂಬ ವರ್ಗದವರು ಹಾಜರಿದ್ದರು.

### ಬರ ನಿರ್ವಹಣೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಬಿ.ಜಗದೇವ

# ನೀರು ಪೂರೈಕೆಯಲ್ಲಿ ನಿಷ್ಕಾಳಜಿ ಬೇಡ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನಾದ್ಯಂತ ಈ ಬಾರಿ ಬರಗಾಲ ಆವರಿಸಿದ್ದು, ಮಳೆಯ ಕೊರತೆ ಹಿನ್ನೆಲೆಯಲ್ಲಿ ಜನ-ಜಾನುವಾರುಗಳಿಗೆ ನೀರಿನ ಕೊರತೆ ಉಂಟಾಗುತ್ತಿದೆ. ಕುಡಿಯುವ ನೀರು ಪೂರೈಕೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ವಹಿಸದಂತೆ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರು ಮತ್ತು ತಾಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ. ಜಗದೇವ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಂಚಾಯಿತಿ ಸಭಾ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಬರ ನಿರ್ವಹಣೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಮಳೆ ಕೊರತೆ ಉಂಟಾದರೆ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ರೀತಿಯ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳುವುದು ಗ್ರಾ.ಪಂ ಮಟ್ಟದ ಮತ್ತು ಸ್ಥಳೀಯ ಆಡಳಿತ ವ್ಯವಸ್ಥೆಯ ಅಧಿಕಾರಿಗಳ ಜವಾಬ್ದಾರಿಯಾಗಿದೆ. ಜೂನ್ ಅಂತ್ಯದವರೆಗೂ ಕುಡಿಯುವ ನೀರಿನ ಪೂರೈಕೆಯಲ್ಲಿ ಕೊರತೆ ಉಂಟಾಗದಂತೆ ಪೂರ್ವ ನಿಯೋಜಿತ ರೂಪುರೇಷೆಯನ್ನು ತಯಾರಿಸುವಂತೆ ಸೂಚಿಸಿದರು.



ಬಾಡಿಗೆ ಬೋರ್‌ವೆಲ್ ಮೂಲಕ ನೀರು ಒದಗಿಸಲು ಬೋರ್‌ವೆಲ್ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಳ್ಳುವಾಗ ಸರಕಾರದ ನಿರ್ದೇಶನದಂತೆ ಕ್ರಮ ಕೈಗೊಳ್ಳಬೇಕು. ಶುದ್ಧ ಕುಡಿಯುವ ನೀರಿನ ಘಟಕ ಚಾಲನೆಯಲ್ಲಿರುವಂತೆ ನೋಡಿಕೊಳ್ಳಲು ಗ್ರಾಮೀಣ ನೀರು ಪೂರೈಕೆ ಅಧಿಕಾರಿಗಳಿಗೆ ಸೂಚಿಸಿದರು. ಬರ ನಿರ್ವಹಣೆ ಬಗ್ಗೆ ನಿಷ್ಕಾಳಜಿ ವಹಿಸದೆ ಎಲ್ಲ ಹಂತದ ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ನಿಗದಿತ ಸಮಯದಲ್ಲಿ ನಿರ್ವಹಿಸಬೇಕು. ಅಗತ್ಯವಿರುವ ಕಡೆಗೆ ಟ್ಯಾಂಕರ್ ಮೂಲಕ ನೀರು ಒದಗಿಸಲು ವ್ಯವಸ್ಥೆ ಮಾಡಬೇಕು ಎಂದು ಸೂಚನೆ ನೀಡಿದರು.

ತಹಸೀಲ್ದಾರ್ ವಾಸುದೇವ ಸ್ವಾಮಿ ಮಾತನಾಡಿ, ಬರನಿರ್ವಹಣೆಗೆ ಅಗತ್ಯ ಕ್ರಮಗಳನ್ನು ಇಲಾಖೆಯಿಂದ ತೆಗೆದುಕೊಳ್ಳಲಾಗುತ್ತಿದ್ದು, ಕುಡಿಯುವ ನೀರು ಪೂರೈಸುವ ನಿಟ್ಟಿನಲ್ಲಿ ಸ್ಥಳೀಯ ಆಡಳಿತ ವಿಶೇಷ ಕಾಳಜಿ ವಹಿಸುವದು ಅಗತ್ಯವಾಗಿದೆ. ನೀರಿನ ಸಮಸ್ಯೆ ಉಲ್ಬಣವಾಗದಂತೆ ಸಾರ್ವಜನಿಕವಾಗಿ ಇರುವ ನೀರು ಪೂರೈಕೆಗಳನ್ನು ಸರಿಯಾಗಿ ನಿರ್ವಹಿಸುವದಕ್ಕೆ ಕ್ರಮ ತೆಗೆದುಕೊಳ್ಳಬೇಕು ಎಂದು ತಿಳಿಸಿದರು. ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ತಾಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಆಡಳಿತಾಧಿಕಾರಿಗಳು, ತೋಟಗಾರಿಕೆ, ಪಶುಪಾಲನೆ, ಅರಣ್ಯ ಮತ್ತು ಕುಡಿಯುವ ನೀರು ಪೂರೈಕೆ ತಾಲೂಕು ಮಟ್ಟದ ಅಧಿಕಾರಿಗಳು, ತಾಲೂಕು ಪಂಚಾಯಿತಿ ಸಿಬ್ಬಂದಿಗಳು ಇದ್ದರು.

> ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಮಾತನಾಡಿ, ಜನಸಂಖ್ಯೆ ಅನುಸಾರ ಕುಡಿಯುವ ನೀರು ಪೂರೈಕೆಗೆ ಅಗತ್ಯವಾದ ಬೋರ್‌ವೆಲ್ ಲಭ್ಯವಿರುವಂತೆ ನೋಡಿಕೊಳ್ಳಬೇಕು. ಜಲಾಗಾರ, ಪೈಪ್‌ಲೈನ್‌ಗಳ ಸುತ್ತ ಸ್ವಚ್ಛತೆ ಇರುವಂತೆ ನೋಡಿಕೊಳ್ಳಬೇಕು. ಮುಂದಿನ ಕೆಲ ದಿನಗಳಲ್ಲಿ ಕುಡಿಯುವ ನೀರಿನ ತೊಂದರೆ ಉಂಟಾಗುವ ಸಾಧ್ಯತೆ ಹೆಚ್ಚಿದ್ದು, ಎಲ್ಲ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಹೇಳಿದರು.

## ಎಲ್‌ಟಿಟಿಇ ಮೇಲಿನ ನಿಷೇಧ: ಮತ್ತೆ 5 ವರ್ಷ ವಿಸ್ತರಿಸಿದ ಕೇಂದ್ರ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಶ್ರೀಲಂಕಾದ ಪ್ರತ್ಯೇಕವಾದಿ ಸಂಘಟನೆ ಎಲ್‌ಟಿಟಿಇ ಮೇಲಿನ ನಿಷೇಧವನ್ನು ಕೇಂದ್ರ ಸರ್ಕಾರ ಪುನಃ 5 ವರ್ಷಗಳ ಕಾಲ ವಿಸ್ತರಿಸಿದೆ. ಜನರಿಗೆ ಪ್ರತ್ಯೇಕವಾದದ ಬಗ್ಗೆ ಪ್ರವೃತ್ತಿಯನ್ನು ಬೆಳಸುವುದರ ಜೊತೆಗೆ ಭಾರತದ ಪ್ರಾದೇಶಿಕ ಸಮಗ್ರತೆಗೆ ಮುಖ್ಯವಾಗಿ ತಮಿಳುನಾಡಿಗೆ ಬೆದರಿಕೆಯಾಗಿದೆ ಎಂದು ಕೇಂದ್ರ ತಿಳಿಸಿದೆ.

ಕಾನೂನುಬಾಹಿರ ಚಟುವಟಿಕೆ ತಡೆಗಟ್ಟುವಿಕೆ ಕಾಯಿದೆ 1967ರ ಸೆಕ್ಷನ್ 3 ಹಾಗೂ ಉಪ ವಿಭಾಗ 1ರಡಿ ಕೇಂದ್ರ ಗೃಹ ಸಚಿವಾಲಯವು ನಿಷೇಧ ಜಾರಿಗೊಳಿಸಿದೆ.

ಎಲ್‌ಟಿಟಿಇ ಸಂಘಟನೆ ಮುಖ್ಯವಾಗಿ ಶ್ರೀಲಂಕಾದಲ್ಲಿದ್ದರೂ ಇದರ ಬೆಂಬಲಿಗರು ಹಾಗೂ ಸಹಾನುಭೂತಿ ವ್ಯಕ್ತಪಡಿಸುವವರು ಹಾಗೂ ಏಜೆಂಟ್‌ಗಳು ಭಾರತದ ಭೂಪ್ರದೇಶದಲ್ಲಿ ಇದ್ದಾರೆ ಎಂದು ಗೃಹ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ದೇಶದ ಸಮಗ್ರತೆ ಹಾಗೂ ಭದ್ರತೆಯಲ್ಲಿಎಲ್‌ಟಿಟಿಇ ಇನ್ನೂ ಅಹಿತಕರ ಚಟುವಟಿಕೆಗಳಲ್ಲಿ ತೊಡಗಿದೆ ಎಂದು ಗೃಹ ಇಲಾಖೆಯ ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ಶ್ರೀಲಂಕಾದ ಮಿಲಿಟರಿಯಿಂದ 2009ರಲ್ಲಿ ಹಿನ್ನಡೆ ಅನುಭವಿಸಿದ ನಂತರ ಎಲ್‌ಟಿಟಿಇ ತಮಿಳರಿಗೆ ಪ್ರತ್ಯೇಕ ರಾಷ್ಟ್ರವಾಗುವ ಪರಿಕಲ್ಪನೆಯನ್ನು ಕೈಬಿಟ್ಟಿಲ್ಲ. ಉಳಿದಿರುವ ಎಲ್‌ಟಿಟಿಇ ನಾಯಕರು ಹಾಗೂ ಕೇಡರ್‌ಗಳು ಚದುರಿದ ಕಾರ್ಯಕರ್ತರನ್ನು ಮತ್ತೆ ಒಂದುಗೂಡಿಸಲು ಸ್ಥಳೀಯವಾಗಿ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ರಹಸ್ಯವಾಗಿ ಹಣಕಾಸು ಸಂಗ್ರಹಿಸುವುದು ಹಾಗೂ ಪ್ರಚಾರದ ಚಟುವಟಿಕೆಗಳನ್ನು ಕೈಗೊಳ್ಳುತ್ತಿದ್ದಾರೆ ಎಂದು ಸೂಚನೆಯಲ್ಲಿ ತಿಳಿಸಲಾಗಿದೆ.

1976ರಲ್ಲಿ ಶ್ರೀಲಂಕಾದಲ್ಲಿ ರೂಪುಗೊಂಡ ಎಲ್‌ಟಿಟಿಇ ನಂತರದ ವರ್ಷಗಳಲ್ಲಿ ತನ್ನ ಸಂಘಟನೆಯನ್ನು ಹೆಚ್ಚಿಸಿಕೊಳ್ಳುತ್ತಾ ಹೋಯಿತು.

## ದೈವ ನಿರ್ಮಿತ ಸಸ್ಯ ಸಂಕುಲ ಕಪ್ಪತಗುಡ್ಡ



■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಹೆಸರಾದ ಕಪ್ಪತ್ತಗಿರಿ ಕಪೋತ ಅಂದರೆ ಪಾರಿವಾಳಗಳ ಹಿಂಡುಗಳನ್ನು ಹೊಂದಿದ ಪ್ರದೇಶ. ಇದರಿಂದ ಕಪೋತ ಮತ್ತು ಗಿರಿ ಎರಡೂ ಸೇರಿ ಕಪ್ಪತ್ತಗುಡ್ಡವಾಗಿದೆ. ಇಲ್ಲಿ ಸುಮಾರು 2 ಸಾವಿರಕ್ಕಿಂತ ಹೆಚ್ಚು ಗಿಡಮೂಲಿಗಳನ್ನು ಕಾಣುತ್ತೇವೆ. ದೇವರು ಮನುಷ್ಯನನ್ನು ಸೃಷ್ಟಿಸಿದಂತೆ ಅವನಿಗೆ ಬರುವ ರೋಗಾದಿಗಳ ನಿವಾರಣೆಗೆ ಗಿಡಮೂಲಿಕೆಗಳ ಸಂಪತ್ತನ್ನು ನಿರ್ಮಿಸಿದ್ದಾನೆ ಎಂದು ಕವಿ ಮಂಜುನಾಥ ಡೋಣಿ ಅಭಿಪ್ರಾಯಪಟ್ಟರು.


ಶ್ರೀ ಶರಣಮ್ಮನವರ ಧ್ಯಾನ ಯೋಗಾಶ್ರಮ ಜಲ್ಲಿಗೇರಿ, ನವರಸ ಕಲಾ ಸಂಘ ಬೆಟಗೇರಿ, ನಿರ್ಮಲ ಸೇವಾ ಸಂಸ್ಥೆ ಹಾಗೂ ನಯನತಾರ ಕಲಾಸಂಘ ಇವುಗಳ ಸಹಯೋಗದಲ್ಲಿ ಜಲ್ಲಿಗೇರಿಯಲ್ಲಿ ಹಮ್ಮಿಕೊಂಡ ಕಪ್ಪತ್ತಗುಡ್ಡದ ಸಸ್ಯಸಿರಿ ಹಾಗೂ ವಿಶ್ವ ತಾಯಂದಿರ ದಿನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಕಾಯಕ್ಕೆ ಮತ್ತು ಬುದ್ಧಿಗೆ ಶಕ್ತಿ ಬರಯುವವರೆಗೂ ಬೆಳೆಸಿದ ತಾಯಿಗೆ ನಾವು ಚಿರಋಣಿಯಾಗಿರಬೇಕು. ಆಧುನಿಕದ ಆಡಂಬರದಲ್ಲಿ ಹೆತ್ತವರನ್ನು ಕಡೆಗಣಿಸುವುದು ಮಹಾಪಾಪ. ಕಪ್ಪತ್ತಗುಡ್ಡ ಕಲ್ಪವೃಕ್ಷ, ಕಾಮಧೇನು. ನಮಗೆ ಬೇಕಾದ ವಸ್ತುಗಳೆಲ್ಲಾ ದೊರಕುತ್ತವೆ. ಆದ್ದರಿಂದ ಕಪ್ಪತ್ತಗಿರಿ ನಮ್ಮ ಕರುನಾಡಿನ ಸಸ್ಯಸಂಪತ್ತನ್ನು ಹೊಂದಿದ ಸುಂದರ ಗಿರಿಯಾಗಿದೆ ಎಂದರು.

ಡಾ. ರಾಜೇಂದ್ರ ಗಡಾದ ಮಾತನಾಡಿ, ಕಪ್ಪತ್ತಗಿರಿಯ ಸಸ್ಯಸಂಪತ್ತು ಬೆಂಕಿಗಾಹುತಿಯಾಗುತ್ತಿದೆ. ನಾವು ಮಾನವ ನಿರ್ಮಿತ ಔಷಧ ಪಡೆಯುವುದಕ್ಕೆ ಉತ್ಸುಕರಾಗಿದ್ದೇವೆ. ಅದನ್ನು ಬಿಟ್ಟು ದೇವರು ನಿರ್ಮಿಸಿದ ವನಸ್ಪತಿಯನ್ನು ಬಳಕೆ ಮಾಡಿದರೆ ಸಮೃದ್ಧ ಆರೋಗ್ಯ ವೃದ್ಧಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಆಶ್ರಮದ ಪ್ರಧಾನ ಸಂಚಾಲಕರಾದ ಚನ್ನಬಸವ ಗುರೂಜಿ ಅಧ್ಯಕ್ಷತೆ ವಹಿಸಿದ್ದರು. ನಿರ್ಮಲಾ ತರವಾಡೆ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಕಳಕಪ್ಪ ಜಲ್ಲಿಗೇರಿ ಕಪ್ಪತ್ತಗುಡ್ಡದ ಸಸ್ಯಸಿರಿ ಕುರಿತು ಉಪನ್ಯಾಸ ನೀಡಿದರು. ಮುರಳೀಧರ ಸ್ಯಾವಿ, ಬಸವರಾಜ ಗೂಳರೆಡ್ಡಿ, ಸುನಿತಾ ಕುಬೇರಸಿಂಗ ದೊಡ್ಡಮನಿ ಉಪಸ್ಥಿತರಿದ್ದರು. ಪ್ರೊ. ಬಸವರಾಜ ನೆಲಜೇರಿ ನಿರೂಪಿಸಿ ವಂದಿಸಿದರು. ಗಣೇಶ ಕಬಾಡಿ, ಧರ್ಮೇಂದ್ರ ಇಟಗಿ, ದ್ಯಾಮಣ್ಣ ಉಗಲಾಟ, ಸುನಿತಾ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು.

## ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣ ಸಮೀಪದ ಸೊರಟೂರ ಗ್ರಾಮದ ಕರ್ನಾಟಕ ಪಬ್ಲಿಕ್ ಪ್ರೌಢಶಾಲೆ ಪ್ರಸ್ತುತ ಸಾಲಿನ ಎಸ್ಸೆಸ್ಸೆಲ್ಸಿ ಫಲಿತಾಂಶ 61.50ರಷ್ಟಾಗಿದ್ದು, ಪೃಥ್ವಿ ಕುಸ್ಲಾಪೂರ (ಶೇ.90.72) ಪ್ರಥಮ, ಮರಿಯಮ್ಮಾ ರಣತೂರ (ಶೇ. 87.84) ದ್ವಿತೀಯ, ಸ್ಮೃತಿ ಗುಡಿ (ಶೇ. 82.24) ತೃತೀಯ ಸ್ಥಾನ ಗಳಿಸಿ ಶಾಲೆಗೆ ಕೀರ್ತಿ ತಂದಿದ್ದು, ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.



SSLC ( CBSE) ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು, ಜೆ.ಸಿ ಪ್ರೌಢಶಾಲೆಯ ವಿದ್ಯಾರ್ಥಿನಿ ತೈಯ್ಯಿಬಾ ಸೈಯದ್ ತಾಹೀರ ಖಾಜಿ ಶೇ.90 ಅಂಶಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿನಿಯ ತಂದೆ ಸೈಯದ ತಾಹೀರ್ ಖಾಜಿ ಹೆಸ್ಕಾಂ ಅಧಿಕಾರಿಯಾಗಿದ್ದು, ತಾಯಿ ಪರವೀನಬಾನು ಗೃಹಿಣಿಯಾಗಿದ್ದಾರೆ. ವಿದ್ಯಾರ್ಥಿನಿಯ ಈ ಸಾಧನೆಗೆ ಕುಟುಂಬದ ಸದಸ್ಯರು ಹಾಗೂ ಶಾಲಾ ಆಡಳಿತ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

## ಎಚ್.ಡಿ. ರೇವಣ್ಣರವರಿಗೆ ಜಾಮೀನು ಹಾಜಿಅಲಿ ಹೆಚ್ ಕೊಪ್ಪಳ ಹರ್ಷ

■ವಿಜಯಸಾಕ್ಷಿ ಸುದ್ದಿ, ಗದಗ



ಜೆಡಿಎಸ್ ಪಕ್ಷದ ಮಾಜಿ ಸಚಿವರು ಹಾಗೂ ಹಾಲಿ ಶಾಸಕರಾದ ಎಚ್.ಡಿ. ರೇವಣ್ಣ ಅವರು ಯಾವುದೇ ತಪ್ಪು ಮಾಡದೇ ಇದ್ದರೂ ಅವರಿಗೆ ರಾಜಕೀಯ ಪ್ರೇರಿತ ಪ್ರಕರಣದಲ್ಲಿ ಆರೋಪಿಯನ್ನಾಗಿಸಿ, ಐದು ದಿನಗಳಿಂದ ಜೈಲಿನಲ್ಲಿ ಇಟ್ಟಿರುವುದು ಕರ್ನಾಟಕದ ಆಡಳಿತದಲ್ಲಿರುವ ಕಾಂಗ್ರೆಸ್ ಪಕ್ಷಕ್ಕೆ ಶೋಭೆ ತರುವ ವಿಷಯವಲ್ಲ ಎಂದು ಗದಗ ಜಿಲ್ಲಾ ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಹೆಚ್ ಕೊಪ್ಪಳ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾನೂನು ಹೋರಾಟ ನಡೆಸಿ ಸಮಗ್ರವಾದ ವಾದ-ವಿವಾದಗಳನ್ನು ಆಲಿಸಿದ ನ್ಯಾಯಾಲಯ ಅಪಹರಣ ಪ್ರಕರಣ ಸುಳ್ಳು ಎಂದು ಸಂತ್ರಸ್ಥ ಮಹಿಳೆಯ ಹೇಳಿಕೆ ಹಾಗೂ ಎಲ್ಲಾ ದಾಖಲಾತಿಗಳನ್ನು ಆಧರಿಸಿ ನ್ಯಾಯಾಲಯ ರೇವಣ್ಣನವರಿಗೆ ಜಾಮೀನು ನೀಡಿರುವುದು ಸಂತೋಷದ ವಿಷಯವೆಂದು ಹೇಳಿಕೆ ನೀಡಿದ್ದಾರೆ.

## ಹೆಚ್.ಸಿ.ಇ.ಎಸ್ ವಿದ್ಯಾರ್ಥಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಸುಂಡಿಯ ಹೆಚ್.ಸಿ.ಇ.ಎಸ್. ಪ್ರೌಢಶಾಲೆಯ ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ. 87.50ರಷ್ಟಾಗಿದ್ದು, ರಾಜೇಶ್ವರಿ ಹಳ್ಳಿಕೇರಿ ಪ್ರಥಮ (ಶೇ. 91.04), ತೇಜಸ್ವಿನಿ ಕರಿಗಾರ (ಶೇ. 83.52) ದ್ವಿತೀಯ, ಸಂಜನಾ ದೊಡ್ಡಮನಿ (ಶೇ. 80.08) ಶಾಲಾ ಮಟ್ಟದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.

ಸಾಧನೆಗೈದ ಮತ್ತು ಉತ್ತೀರ್ಣರಾದ ಎಲ್ಲ ವಿದ್ಯಾರ್ಥಿಗಳನ್ನು ಸಂಸ್ಥೆಯ ಅಧ್ಯಕ್ಷ ಆರ್.ಎಮ್. ಮೂಲಿಮನಿ, ಸದಸ್ಯರು, ಎಸ್‌ಡಿಎಂಸಿ ಅಧ್ಯಕ್ಷ ಸೋಮರಡ್ಡಿ ರಾಮೇನಹಳ್ಳಿ, ಭೂಮಕ್ಕನವರ ಮತ್ತು ಸದಸ್ಯರು, ಸಂಸ್ಥೆಯ ಆಡಳಿತಾಧಿಕಾರಿ ಆರ್. ಎಸ್. ಪಾಟೀಲ ಹಾಗೂ ಶಾಲೆಯ ಮುಖ್ಯೋಪಾಧ್ಯಾಯರು, ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.



## ಎಂಸಿಸಿ ಈಗ 'ಮೋದಿ ನೀತಿ ಸಂಹಿತೆ' ಆಗಿದೆ; ಬಿಜೆಪಿಯಿಂದ ನೀತಿ ಸಂಹಿತೆ ಉಲ್ಲಂಘನೆ ನಿಲ್ಲಿಸಿ: ಚುನಾವಣಾ ಆಯೋಗಕ್ಕೆ ಟಿಎಂಸಿ ಪತ್ರ




■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮಾದರಿ ನೀತಿ ಸಂಹಿತೆಯನ್ನು ಮೋದಿ ನೀತಿ ಸಂಹಿತೆಯಾಗಿ ಪರಿವರ್ತಿಸಲಾಗಿದೆ ಎಂದು ಆರೋಪಿಸಿರುವ ತೃಣಮೂಲ ಕಾಂಗ್ರೆಸ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಬಿಜೆಪಿ ಮತ್ತು ಅದರ ನಾಯಕರು ಚುನಾವಣಾ ನೀತಿ ಸಂಹಿತೆಯ ಘೋರ ಉಲ್ಲಂಘನೆ ಮಾಡುವುದನ್ನು ನಿಲ್ಲಿಸುವಂತೆ ಚುನಾವಣಾ ಆಯೋಗಕ್ಕೆ ಮಂಗಳವಾರ ಮನವಿ ಮಾಡಿದೆ.

ಚುನಾವಣಾ ಸಮಿತಿಗೆ ಈ ವಿಷಯದ ಬಗ್ಗೆ ಮನವಿ ಸಲ್ಲಿಸಿದ ನಂತರ, ಟಿಎಂಸಿಯ ರಾಜ್ಯಸಭಾ ಸಂಸದರಾದ ಸಾಕೇತ್ ಗೋಖಲೆ ಮತ್ತು ಸಾಗರಿಕಾ ಘೋಸ್ ಅವರು ಮಾಧ್ಯಮವನ್ನು ಉದ್ದೇಶಿಸಿ ಮಾತನಾಡಿದರು. ಮಾದರಿ ನೀತಿ ಸಂಹಿತೆ (ಎಂಸಿಸಿ) ಉಲ್ಲಂಘನೆಗಳ ಬಗ್ಗೆ ಪ್ರಧಾನಿ ಮೋದಿ ವಿರುದ್ಧ ಚುನಾವಣಾ ಆಯೋಗದ ನಿಷ್ಕ್ರಿಯತೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಬಿಜೆಪಿ ಮುಖ್ಯಸ್ಥ ಜೆಪಿ ನಡ್ಡಾ ಅವರಿಗೆ ನೋಟಿಸ್ ನೀಡಲಾಗಿದೆ. ಆದರೆ, ನಮ್ಮ ದೂರುಗಳ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಬದಲಾಗಿ, ಪ್ರಧಾನಿ ಮೋದಿ ತಮ್ಮ ಹೇಳಿಕೆಗಳಲ್ಲಿ ಹೆಚ್ಚು ಧೈರ್ಯಶಾಲಿಯಾಗಿದ್ದಾರೆ. ಅವರು ಚುನಾವಣಾ ಸಮಯದಲ್ಲಿ ತನಗೆ ಯಾವುದೇ ನಿರ್ಬಂಧ ಇಲ್ಲ ಎಂದು ಭರವಸೆಗಳನ್ನು ನೀಡುತ್ತಿದ್ದಾರೆ, ತಮ್ಮ ಪಕ್ಷವು ಆಡಳಿತ ಪಕ್ಷವಾಗಿ ಜಾರಿಗೆ ತರಲು ಸಾಧ್ಯವಾಗದ ಆರ್ಥಿಕ ಯೋಜನೆಗಳನ್ನು ಘೋಷಿಸುತ್ತಿದ್ದಾರೆ ಎಂದು ಹೇಳಿದರು.

"ಆದರೂ, ಮಾದರಿ ನೀತಿ ಸಂಹಿತೆಯ ಬಗ್ಗೆ ನಿರ್ಲಕ್ಷ್ಯ ತೇ-ೂರುತ್ತಿದೆ" ಎಂದು ಗೋಖಲೆ ಇಲ್ಲಿನ ಚುನಾವಣಾ ಆಯೋಗದ ಪ್ರಧಾನ ಕಚೇರಿಯ ಹೊರಗೆ ಸುದ್ದಿಗಾರರಿಗೆ ತಿಳಿಸಿದರು.

ಘೋಷ್ ಮತ್ತು ಗೋಖಲೆ ಇಬ್ಬರೂ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಗೆ ಪ್ರಧಾನಿ ಮೋದಿಯವರನ್ನು ಹೊಣೆಗಾರರನ್ನಾಗಿ ಮಾಡುತ್ತಿಲ್ಲ ಎಂದು ಪ್ರತಿಪಾದಿಸಿದರು.

"ಚುನಾವಣಾ ಆಯೋಗದ ಮೇಲ್ವಿಚಾರಣೆಯಲ್ಲಿ, ಮಾದರಿ ನೀತಿ ಸಂಹಿತೆ ಈಗ ಮೋದಿ ನೀತಿ ಸಂಹಿತೆಯಾಗಿ ಮಾರ್ಪಟ್ಟಿದೆ. ಮೋದಿ ಅವರು ನೀಡಿದ ಯಾವುದೇ ಹೇಳಿಕೆಯನ್ನು ನಿಯಂತ್ರಿಸಲಾಗುವುದಿಲ್ಲ ಮತ್ತು ಅವರ ವಿರುದ್ಧ ಯಾವುದೇ ಕ್ರಮ ತೆಗೆದುಕೊಳ್ಳುವುದಿಲ್ಲ. ಇದು ನಮ್ಮ ಚುನಾವಣೆಯ ನ್ಯಾಯ ಸಮ್ಮತತೆಯನ್ನು ಹಾಳುಮಾಡುತ್ತದೆ" ಎಂದು ಘೋಸ್ ಹೇಳಿದರು.

ಚುನಾವಣೆಯ ಉಳಿದ ಹಂತಗಳಿಗೆ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು, ದೂರುಗಳ ಮೇಲೆ ಕ್ರಮ ಕೈಗೊಳ್ಳಬೇಕು ಮತ್ತು ಪ್ರತಿ ಬಾರಿ ಚುನಾವಣಾ ನಿಯಮಗಳನ್ನು ಉಲ್ಲಂಘಿಸಿದಾಗ ಪ್ರಧಾನಿ ಮೋದಿ ಅವರಿಗೆ ಕ್ಲೀನ್ ಚಿಟ್ ನೀಡಬಾರದು ಎಂದು ಒತ್ತಾಯಿಸಿ ನಾವು ಚುನಾವಣಾ ಆಯೋಗಕ್ಕೆ ಪತ್ರ ಬರೆದಿದ್ದೇವೆ ಎಂದು ಗೋಖಲೆ ಹೇಳಿದರು.

## ಮಹಾರಾಷ್ಟ್ರ ಸಿಎಂ ಶಿಂಧೆ ಹೇಳಿಕೆ; ರಾಜ್ಯ ಬಿಜೆಪಿ ನಾಯಕರನ್ನು 'ಮಲ್ಲಪ್ಪ ಶೆಟ್ಟಿ'ಗೆ ಹೋಲಿಸಿದ ಕಾಂಗ್ರೆಸ್

■ವಿಜಯಸಾಕ್ಷಿ ಸುದ್ದಿ, ಮುಂಬೈ

ಲೋಕಸಭೆ ಚುನಾವಣೆಯ ನಂತರ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂಬ ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರ ಹೇಳಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಕಾಂಗ್ರೆಸ್ ಪಕ್ಷದಿಂದ ತೀವ್ರ ಟೀಕೆ ವ್ಯಕ್ತವಾಗಿದೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಕಾಂಗ್ರೆಸ್, "ಕರ್ನಾಟಕದ ಸರ್ಕಾರವನ್ನು ಉರುಳಿಸಲು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆಯವರ ಸಹಕಾರ ಕೋರಿರುವ ಕರ್ನಾಟಕದ ಬಿಜೆಪಿ ನಾಯಕರನ್ನು ಕಿತ್ತೂರು ರಾಣಿ ಚೆನ್ನಮ್ಮನ ಬೆನ್ನಿಗೆ ಚೂರಿ ಹಾಕಿದ ಮಲ್ಲಪ್ಪ ಶೆಟ್ಟಿಗೆ ಹೋಲಿಸಬಹುದು. ಏಕನಾಥ್ ಶಿಂಧೆ ಅವರೇ, ಈ ಸರ್ಕಾರ ಕನ್ನಡಿಗರ ಸ್ವಾಭಿಮಾನದ ಸರ್ಕಾರ, ಕನ್ನಡಿಗರ ಆಶೀರ್ವಾದದ ಸರ್ಕಾರ, ಕನ್ನಡಿಗರ ಪ್ರೀತಿಯ ಸರ್ಕಾರ. ಕನ್ನಡಿಗರ ತಂಟೆಗೆ ಬರುವ ಮುನ್ನ ವೀರ ರಾಣಿ ಬೆಳವಡಿ ಮಲ್ಲಮರನ್ನು ಒಮ್ಮೆ ನೆನಪು ಮಾಡಿಕೊಳ್ಳಿ" ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

## ನಿವೃತ್ತ ಯೋಧನಿಗೆ ಅದ್ದೂರಿ ಸ್ವಾಗತ

■ವಿಜಯಸಾಕ್ಷಿ ಸುದ್ದಿ, ಗದಗ

ನಿರಂತರ 28 ವರ್ಷಗಳ ಕಾಲ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿ, ಮರಳಿ ತಾಯ್ನಾಡಿಗೆ ಆಗಮಿಸಿದ ವೀರಯೋಧ ಸುಬೇದಾರ್ ಪ್ರಕಾಶ್‌ಗೌಡ ಕೆಂಚನಗೌಡ್ರರನ್ನು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ನೇತೃತ್ವದಲ್ಲಿ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಗದುಗಿನ ಹಳೆ ಡಿಸಿ ಆಫೀಸ್ ಸರ್ಕಲ್ ಹತ್ತಿರವಿರುವ ಫೀಲ್ಡ್ ಮಾರ್ಷಲ್ ಜನರಲ್ ಕೆ.ಎಂ. ಕಾರ್ಯಪ್ಪ ಸರ್ಕಲ್‌ನಿಂದ ಭವ್ಯ ಮೆರವಣಿಗೆ ಪ್ರಾರಂಭಗೊಂಡು ನಿವೃತ್ತ ಯೋಧನ ಸ್ವಗೃಹದವರೆಗೆ ಕರೆತಂದು ಸನ್ಮಾನಿಸಲಾಯಿತು.



ಕಾರ್ಯಕ್ರಮದಲ್ಲಿ ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ಮಾತನಾಡಿ, ದೇಶದ ಗಡಿಯಲ್ಲಿ ನಿಂತು ನಮ್ಮನ್ನು ಯೋಧರು ಹೇಗೆ ರಕ್ಷಿಸುತ್ತಿದ್ದಾರೆಯೋ, ಅದೇ ರೀತಿ ಅವರು ನಿವೃತ್ತಿ ಹೊಂದಿ ಬಂದ ನಂತರ ನಾವೆಲ್ಲರೂ ಅವರ ಸಾಮಾಜಿಕ ಜೀವನದಲ್ಲಿ ನೆಮ್ಮದಿಯಿಂದ ಬಾಳಲು ಸಹಕರಿಸೋಣ. ಅಂದಾಗ ಮಾತ್ರ ನಮ್ಮ ದೇಶ ಸುಭದ್ರವಾಗಿರಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷ ಎನ್. ಆರ್. ದೇವಂಗಮಠ, ಪ್ರ. ಕಾರ್ಯದರ್ಶಿ ವಿಜಯ್ ಬಡಿಗೇರ, ಸಹ ಕಾರ್ಯದರ್ಶಿ ವೆಂಕಪ್ಪ ಕಲಹಾಳ, ಖಜಾಂಚಿ ಮಲ್ಲೇಶಪ್ಪ ಕೊಣ್ಣೂರ, ಗದಗ ಜಿಲ್ಲಾ ಘಟಕದ ವೀರನಾರಿಯರ ಅಧ್ಯಕ್ಷೆ ಇಂದಿರಾ ಹೆಬಸೂರ, ಸಂಘಟನಾ ಕಾರ್ಯದರ್ಶಿ ಜಯಲಕ್ಷ್ಮೀ ಹೂಗಾರ, ಪದಾಧಿಕಾರಿಗಳು, ಸದಸ್ಯರು, ಅರೆಸೇನಾಪಡೆಗಳ ಯೋಧರು, ಕೆಂಚನಗೌಡ್ರ ಬಂಧು-ಬಳಗದವರು ಉಪಸ್ಥಿತರಿದ್ದರು.

### ತೋಂಟದಾರ್ಯ ವಿದ್ಯಾಪೀಠದ ಸಿಬಿಎಸ್‌ಇ ಶಾಲೆಯ ಸಾಧನೆ

## ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ. 100

■ವಿಜಯಸಾಕ್ಷಿ ಸುದ್ದಿ, ಗದಗ

ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಸಿಬಿಎಸ್‌ಇ ಶಾಲೆಯ 2023-24ನೇ ಸಾಲಿನ ಶೈಕ್ಷಣಿಕ ವರ್ಷದ 10ನೇ ತರಗತಿಯ ಪರೀಕ್ಷೆಯಲ್ಲಿ ಶೇ. 100 ಫಲಿತಾಂಶವನ್ನು ಪಡೆದಿದೆ. ಶೈಕ್ಷಣಿಕ ವರ್ಷದಲ್ಲಿ ಅನೇಕ ಶೈಕ್ಷಣಿಕ ಚಟುವಟಿಕೆ, ಸರಣಿ ಪರೀಕ್ಷೆ, ವಿಶೇಷ ತರಗತಿಗಳೊಂದಿಗೆ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಉತ್ತಮ ಸಾಧನೆ ಮಾಡುತ್ತಾ ಬಂದ ಪ್ರಯುಕ್ತ ಈ ಫಲಿತಾಂಶ ದಾಖಲಿಸಿದೆ.



ಪರೀಕ್ಷೆಗೆ ಹಾಜರಾಗಿದ್ದ 86 ವಿದ್ಯಾರ್ಥಿಗಳಲ್ಲಿ 15 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ಸ್ಥಾನ ಪಡೆದಿದ್ದು, 62 ವಿದ್ಯಾರ್ಥಿಗಳು ಪ್ರಥಮ ಸ್ಥಾನ, 9 ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಪಡೆದಿದ್ದಾರೆ. ಆದಿತ್ಯ ಕಮತರ ಶೇ. 93.4 ಅಂಕಗಳೊಂದಿಗೆ ಪ್ರಥಮ, ಸುಮನ್ ಶಿವಪ್ಪಯ್ಯನಮಠ ಶೇ. 93.2 ಅಂಕಗಳೊಂದಿಗೆ ದ್ವಿತೀಯ, ಪ್ರಿಯಾಂಕ ಹುಚ್ಚಯ್ಯನಮಠ ಶೇ. 91.8 ಅಂಕಗಳೊಂದಿಗೆ ತೃತೀಯ, ಶೀಫಾ ತಹಸೀಲ್ದಾರ್ ಶೇ. 90.6, ಐಶ್ವರ್ಯ ಗೋಸಗೊಂಡಿ ಶೇ. 90.4, ಓಂ ಸುನೀಲ ಬಾಂಡಗೆ ಶೇ. 89.4, ಅನಿಲ ಕುಮಾರ್ ಲಮಾಣಿ ಮತ್ತು ಅರ್ಪಿತಾ ಲಮಾಣಿ ಶೇ. 89, ಸೃಷ್ಟಿ ಉಪ್ಪಾರ ಶೇ. 88.4, ಮಹಾಂತೇಶ ಕಮತರ ಮತ್ತು ಪವಿತ್ರಾ ಹಳ್ಳಿ ಶೇ. 87.8, ಸ್ಫೂರ್ತಿ ಗಿರಿಯಪ್ಪಗೌಡರ ಶೇ. 86.8, ದೀಕ್ಷಾ ಬಂಡಿ ಶೇ. 85.2, ಅಮೃತ ಕೊರವರ್ ಶೇ. 85 ಅಂಕ ಗಳಿಸಿದ್ದಾರೆ. ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳಿಗೆ ಹಾಗೂ 10ನೇ ತರಗತಿ ಶಿಕ್ಷರಿಗೆ ಸಂಸ್ಥೆಯ ಅಧ್ಯಕ್ಷರಾದ ಜ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ, ಆಡಳಿತ ಮಂಡಳಿಯ ಎಲ್ಲಾ ಸದಸ್ಯರು, ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿ ಶುಭ ಹಾರೈಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka